ಕನ್ನಡಪ್ರಭ
ಶನಿವಾರ 9.05.2026

ಗರಿಷ್ಠ 36 c | ಕನಿಷ್ಠ 24 c

ಸುದ್ದಿ ಸಿಂಚನ

ಮಣ್ಣನ್ನು ರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿ

ರೋಣ: ನಮ್ಮ ದೇಹವನ್ನು ಹೇಗೆ ಕಾಪಾಡಿಕೊಳ್ಳುತ್ತೇವೆಯೋ ಹಾಗೆಯೇ ನಮ್ಮ ಹೊಲದಲ್ಲಿನ ಮಣ್ಣನ್ನು ಕಾಪಾಡಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದರು.

ಗಜೇಂದ್ರಗಡ ತಾಲೂಕಿನ ಅಬ್ಬಿಗೇರಿ ಗ್ರಾಮದಲ್ಲಿ ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆಯಡಿ ಹಮ್ಮಿಕೊಂಡಿದ್ದ ಭೂ ಸಂಪನ್ಮೂಲ ಸಮೀಕ್ಷೆ ಸಾಕ್ಷರತಾ ಅಭಿಯಾನ ಉದ್ಘಾಟಿಸಿ ಮಾತನಾಡಿ, ಮಣ್ಣು ಬಹಳ ಶ್ರೇಷ್ಠವಾಗಿದೆ. ಫಲವತ್ತಾದ ಮಣ್ಣು ಎಷ್ಟೋ ವರ್ಷಗಳಿಂದ ರೂಪುಗೊಂಡಿದ್ದು, ಸಾವಯವ ಗೊಬ್ಬರಗಳನ್ನೇ ಉಪಯೋಗಿಸಿ ಮಣ್ಣನ್ನು ಕಾಪಾಡಬೇಕು ಎಂದರು. ಉಪ ಕೃಷಿ ನಿರ್ದೇಶಕ ಪಾಲಾಕ್ಷಗೌಡ ಮಾತನಾಡಿ, ರಿವಾರ್ಡ್ ಯೋಜನೆ ಬಹಳಷ್ಟು ವೈಜ್ಞಾನಿಕ ಹಾಗೂ ಉಪಯುಕ್ತ ಮಾಹಿತಿ ರೈತರಿಗೆ ನೀಡುತ್ತಿದೆ. ಈ ಮಾಹಿತಿಯನ್ನು ರೈತರು ಸದುಪಯೋಗ ಮಾಡಿಕೊಳ್ಳಬೇಕು ಎಂದರು. ಸಹಾಯಕ ಕೃಷಿ ನಿರ್ದೇಶಕ ಶೌಕತ್ ಅಲಿ ತಹಶೀಲ್ದಾರ್ ಮಾತನಾಡಿ, ಭೂ ಸಂಪನ್ಮೂಲ ಮಾಹಿತಿಯನ್ನು ಈಗಾಗಲೇ ರೈತರಿಗೆ ತರಬೇತಿ ಮೂಲಕ ನೀಡಲಾಗಿದ್ದು, ಕಾರ್ಡುಗಳನ್ನು ವಿತರಿಸಲಾಗಿದೆ ಎಂದರು. ಅಬ್ಬಿಗೇರಿ ಗ್ರಾಮದ ಪ್ರಗತಿಪರ ರೈತರು, ಮುಖಂಡರು ಹಾಗೂ ಇಲಾಖೆಯ ಸಿಬ್ಬಂದಿ ಇದ್ದರು. ಕೃಷಿ ಅಧಿಕಾರಿ ಬಸವರಾಜ ಗದಗಿನ ಸ್ವಾಗತಿಸಿದರು. ವಿಜಯಲಕ್ಷ್ಮಿ ಜೋಗಿ ನಿರೂಪಿಸಿದರು. ಅನ್ನಪೂರ್ಣ ವಂದಿಸಿದರು.

ನಿಧನ

ಬೂದಪ್ಪ ಹಾವಣ್ಣವರ



ಗದಗ: ತಾಲೂಕಿನ ಬೂದೇಶ್ವರ ಹೊಸಹಳ್ಳಿಯ ಕುರುಬ ಸಮಾಜದ ಹಿರಿಯರಾದ ಬೂದಪ್ಪ ಹಾವಣ್ಣವರ (86) ಶುಕ್ರವಾರ ಮಧ್ಯಾಹ್ನ ನಿಧನರಾದರು. ಮೃತರಿಗೆ ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು ಬಳಗ ಇದ್ದಾರೆ. ಕುರ್ತಕೋಟಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರಾದ ಮೈಲಾರಪ್ಪ ನಿಂಬಣ್ಣ ಹಾವಣ್ಣವರ ಸೇರಿ ಗ್ರಾಮದ ಕುರುಬ ಸಮಾಜದ ಹಿರಿಯರು ಸಂತಾಪ ಸೂಚಿಸಿದ್ದಾರೆ.

ರೋಷನಬಿ ಎಲಿಗಾರ



ರೋಣ: ಪಟ್ಟಣದ ಶಾನುಭೋಗರ ಚಾಳಿನ ನಿವಾಸಿ ರೋಷನಬಿ ಹಟೇಲಸಾಬ್ ಎಲಿಗಾರ(75) ಶುಕ್ರವಾರ ನಿಧನರಾದರು. ಮೃತರಿಗೆ ಮೂವರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳಿದ್ದಾರೆ.

ಮಾರುಕಟ್ಟೆ ಧಾರಣೆ

ಗದಗ

ಉತ್ಪನ್ನ	ಕನಿಷ್ಠ	ಗರಿಷ್ಠ
ಕಡಲೆ	2624	5737
ಉದ್ದಿನಕಾಳು	2044	5624
ಹರಳು ಬೀಜ	5369	5369
ಅಲಸಂದೆ	4006	5929
ಹೆಸರು	4170	5570
ಗೆಜ್ಜೆ ಶೇಂಗಾ	4254	6975
ಹುರುಳಿ ಕಾಳು	2379	4266
ಜೋಳ	1569	4259
ಮೆಕ್ಕೆಜೋಳ	1265	1822
ಕುಸುಬೆ	4820	5509
ಸೂರ್ಯಕಾಂತಿ	6169	6169
ಗೋದಿ	2091	4369



ಗಜೇಂದ್ರಗಡ ತಾಲೂಕಿನ ಅಬ್ಬಿಗೇರಿ ಗ್ರಾಮದಲ್ಲಿ ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆಯಡಿ ಹಮ್ಮಿಕೊಂಡಿದ್ದ ಭೂ ಸಂಪನ್ಮೂಲ ಸಮೀಕ್ಷೆ ಸಾಕ್ಷರತಾ ಅಭಿಯಾನ ಉದ್ಘಾಟಿಸಿ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಮಾತನಾಡಿದರು.



ಗದಗ ಡಿ.ಜಿ. ಮೇಲ್ಮಾಳಗಿ ಆಯುರ್ವೇದ ಮಹಾವಿದ್ಯಾಲಯದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ನಡೆಯಿತು. ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಸಂತೋಷ ಬೆಳವಡಿ, ಎಸ್.ಎಸ್. ಪಟ್ಟಣಶೆಟ್ಟರ ಇತರರು ಇದ್ದರು.

ನಾಳೆಯಿಂದ ಉರೂಸ್

ನರೇಗಲ್ಲ: ಸ್ಥಳೀಯ ಐತಿಹಾಸಿಕ ದರ್ಗಾದ ಹಜರತ್ ರೈಮಾನ್ ಶಾವಲಿ ಶರಣರ ಉರೂಸ್ ಮೇ 10ರಿಂದ ಪ್ರಾರಂಭವಾಗಲಿದೆ ಎಂದು ದರ್ಗಾ ಶರಣರಾದ ಮಂಜುರ್‌ಹುಸೇನ್ ಶಾವಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮೇ 10ರಂದು ಸಂಜೆ ದರ್ಗಾದಿಂದ ಮೆರವಣಿಗೆ ಮೂಲಕ ಕೊಚಲಾಪುರ ಗ್ರಾಮದಲ್ಲಿ ಇರುವ ಲಕ್ಷ್ಮಮ್ಮನ ಪಲ್ಲಕ್ಕಿಗೆ ಪೂಜೆ ಸಲ್ಲಿಸಿ ನಂತರ ಲಕ್ಷ್ಮಮ್ಮನ ಪಲ್ಲಕ್ಕಿ ನರೇಗಲ್ಲಿಗೆ ಕರೆದುಕೊಂಡು ಬರಲಾಗುವುದು. ಪಟ್ಟಣದ ತೆಗ್ಗಿನಕೇರಿ ಓಣಿಯ ಮುಜಾವರ ಮನೆಯಿಂದ ಗಂಧದ ಮೆರವಣಿಗೆ ನಡೆಯಲಿದೆ.

ಮೇ 11ರಂದು ಉರೂಸ್ ನಡೆಯಲಿದ್ದು, ಬೆಳಗ್ಗೆ 6ರಿಂದ 10ರ ವರೆಗೆ ಸಾಧು ಸಂತರಿಗೆ ಅನ್ನ ಸಂತರ್ಪಣೆ ಜರುಗುವುದು. ಸಂಜೆ ಮೆರವಣಿಗೆ ಮೂಲಕ ಲಕ್ಷ್ಮಮ್ಮನ ಪಲ್ಲಕ್ಕಿ ಮರಳಿ ಕೊಚಲಾಪುರ ಗ್ರಾಮಕ್ಕೆ ಕಳಿಸುವ ಜತೆಗೆ ಪಟ್ಟಣದಲ್ಲಿ ಮಂಜುರ್‌ಹುಸೇನ್ ಶಾವಲಿ ಶರಣರ ಮೆರವಣಿಗೆ ನೆರವೇರಲಿದೆ. ರಾತ್ರಿ ದೀಪೋತ್ಸವ, ಮದ್ದು ಹಾರಿಸುವುದು ಮತ್ತು ಪದ್ಧತಿಯಂತೆ ಅನೇಕ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಮೇ 10ರಿಂದ ಮೇ 12ರ ವರೆಗೆ ಪ್ರತಿದಿನ ರಾತ್ರಿ ಖವ್ವಾಲಿ ಕಾರ್ಯಕ್ರಮ ಜರುಗಲಿದೆ. ಮೇ 12ರಂದು ಮರಿ ಉರೂಸ್ ಬೆಳಗ್ಗೆಯಿಂದ ಮಧ್ಯಾಹ್ನದವರೆಗೆ ನಡೆಯುವುದು ಎಂದು ತಿಳಿಸಿದ್ದಾರೆ.

ಸ್ವಚ್ಛವಾಗದ ಮಲಪ್ರಭಾ ಕಾಲುವೆ ರೈತರ ಜಮೀನು ತಲುಪದ ನೀರು

ನೀರಾವರಿ ನಿಗಮದಿಂದ ಕಾಲುವೆ ನಿರ್ವಹಣೆ ಕೈಬಿಡಲು ರೈತರ ಆಗ್ರಹ

• **ಎಸ್.ಜಿ. ತೆಗ್ಗಿನಮನಿ**
ಕನ್ನಡಪ್ರಭ ವಾರ್ತೆ ನರಗುಂದ

ಜಿಲ್ಲೆಯಲ್ಲಿ ಹೆಚ್ಚು ನೀರಾವರಿ ಕೃಷಿ ಹೊಂದಿರುವ ತಾಲೂಕಿನ ಮಲಪ್ರಭಾ ಜಲಾಶಯದ ಮುಖ್ಯ ಕಾಲುವೆಗಳಲ್ಲಿ ಜಾಲಿ ಕಂಟಿ ಬೆಳೆದು ಹೂಳು ತುಂಬಿದ್ದು, ಜಮೀನುಗಳಿಗೆ ಸಮರ್ಪಕವಾಗಿ ನೀರು ತಲುಪುತ್ತಿಲ್ಲ.

ಈ ಮೊದಲು ನರಗುಂದ, ಸವದತ್ತಿ, ಬಾದಾಮಿ, ರಾಮದುರ್ಗ, ರೋಣ ತಾಲೂಕಿನ ಹಲವಾರು ಗ್ರಾಮಗಳ ಜಮೀನುಗಳಿಗೆ ನೀರು ಪೂರೈಕೆ ಮಾಡುವ ಮುಖ್ಯ ಕಾಲುವೆಗಳನ್ನು ಸರ್ಕಾರದಿಂದ ಬಂದ ಅನುದಾನದಲ್ಲಿ ನೀರಾವರಿ ಇಲಾಖೆ ಅಧಿಕಾರಿಗಳು ಸ್ವಚ್ಛಗೊಳಿಸುತ್ತಿದ್ದರು.

ಆದರೆ ಎಚ್.ಕೆ. ಪಾಟೀಲ ಅವರು ಜಲಸಂಪನ್ಮೂಲ ಸಚಿವರಾದ ಸಂದರ್ಭದಲ್ಲಿ ಮಹಾರಾಷ್ಟ್ರ ಮಾದರಿಯಲ್ಲಿ ಇಲಾಖೆಯನ್ನು ನಿಗಮ ಮತ್ತು ನೀರು ಬಳಕೆದಾರರು ಸಂಘ ಸ್ಥಾಪನೆ ಮಾಡಿದಾಗಿನಿಂದ ಕಾಲುವೆಗಳಿಗೆ ವಾರಸುದಾರರು ಇಲ್ಲದಂತಾಗಿವೆ. ಕಾಲುವೆ ರಕ್ಷಣೆ ಮಾಡುವ ಜವಾಬ್ದಾರಿ ನೀರು ಬಳಕೆದಾರರ ಸಂಘದವರದ್ದು ಎಂದು ಅಧಿಕಾರಿಗಳು ಹೇಳುತ್ತಾರೆ. ಇನ್ನೊಂದೆಡೆ ನೀರು ಬಳಕೆದಾರರ ಸಂಘಗಳಿಗೆ ಬೀಗ ಹಾಕಿರುವುದರಿಂದ ಮಲಪ್ರಭಾ ಕಾಲುವೆಗಳು ಅನಾಥವಾಗಿವೆ.

ಕಾಲುವೆ ನೀರು ಸಿಗುತ್ತಿಲ್ಲ: ನೀರಾವರಿ ನಿಗಮವಾದ ನಂತರ ಸರ್ಕಾರದಿಂದ ಕಾಲುವೆಯಲ್ಲಿನ ಜಾಲಿ ಕಂಟಿ, ಹೂಳು ತೆಗೆಸಲು ಸರಿಯಾದ ಸಮಯಕ್ಕೆ ಅನುದಾನ ಬರುತ್ತಿಲ್ಲ. ಇನ್ನೊಂದೆಡೆ ನೀರು ಬಳಕೆದಾರರ ಸಂಘಕ್ಕೆ ರೈತರಿಂದ ಸರಿಯಾಗಿ ನೀರಿನ ಕರ ವಸೂಲಿ ಆಗದ್ದರಿಂದ ಸಂಘವು ಕ್ರಿಯಾಶೀಲವಾಗಿಲ್ಲ. ಹೀಗಾಗಿ ಪ್ರತಿವರ್ಷ ಕಾಲುವೆಗೆ ಜಲಾಶಯದಿಂದ ನೀರು ಪೂರೈಕೆಯಾದರೂ ಕೆಳ(ತೈಲಂಡ) ಭಾಗದ ರೈತರ ಜಮೀನುಗಳಿಗೆ ನೀರು ಸಿಗುತ್ತಿಲ್ಲ.

ಮುಖ್ಯ ಕಾಲುವೆ ಶಿಥಿಲ: ಸರ್ಕಾರ ಕೆಳ(ತೈಲಂಡ) ಭಾಗದ ರೈತರ ಜಮೀನುಗಳಿಗೆ ನೀರು ಮುಟ್ಟಿಸುವ ಉದ್ದೇಶದಿಂದ ಕಾಲುವೆಯನ್ನು ನವೀಕರಣಕ್ಕಾಗಿ ನೂರಾರು ಕೋಟಿ ಅನುದಾನವನ್ನು ಮಂಜೂರುಗೊಳಿಸಿ ದೊಡ್ಡ ಗುತ್ತಿಗೆದಾರರಿಗೆ ಕಾಮಗಾರಿ ವಹಿಸಿತ್ತು. ಆದರೆ ಗುತ್ತಿಗೆದಾರರು ನವೀಕರಣದ ಕಾಮಗಾರಿ ಕಳಪೆ ಮಾಡಿದ್ದರಿಂದ ಕಾಲುವೆ ಶಿಥಿಲಗೊಂಡು ಕಾಂಕ್ರಿಟ್ ಕಿತ್ತು ಹೋಗುತ್ತಿದೆ ಎಂಬುದು ರೈತರ ಆರೋಪವಾಗಿದೆ.

ಕಾಲುವೆ ಸ್ವಚ್ಛಗೊಳಿಸಿಲು ಹಣ ಇಲ್ಲ: ಪ್ರತಿವರ್ಷ ತಾಲೂಕಿನ ರೈತರು ಚಿಕ್ಕ ನರಗುಂದದಿಂದ ಕೊಣ್ಣೂರು ಗ್ರಾಮದವರೆಗೆ 40 ಕಿಮೀ ಜಮೀನುಗಳಿಗೆ ಸುಮಾರು 30 ಸಾವಿರ ಹೆಕ್ಟೇರ್ ಪ್ರದೇಶ ಜಮೀನುಗಳಿಗೆ ನೀರು ಪೂರೈಸುವ ಮುಖ್ಯ ಕಾಲುವೆಯ ಹೂಳು ಮತ್ತು ಜಾಲಿ ಕಂಟಿ ಸ್ವಚ್ಛ ಮಾಡಿ ಜಮೀನುಗಳಿಗೆ ಸರಾಗವಾಗಿ ನೀರು ಮುಟ್ಟಿಸಬೇಕು ಎಂಬುದು ರೈತರ ಪ್ರಮುಖ ಬೇಡಿಕೆಯಾಗಿದೆ. ಈ ಕುರಿತು ರೈತ ಸಂಘಟನೆ ನೀರಾವರಿ ನಿಗಮದ ಅಧಿಕಾರಿಗಳಿಗೆ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ. ಸರ್ಕಾರ ಕಾಲುವೆ ಸ್ವಚ್ಛಗೊಳಿಸಲು ಹಣ ನೀಡುತ್ತಿಲ್ಲವೆಂಬುದು ರೈತರ ಆರೋಪ.



ಮಲಪ್ರಭಾ ಜಲಾಶಯದ ಮುಖ್ಯ ಕಾಲುವೆಯಲ್ಲಿ ಜಾಲಿ ಹೂಳು ತುಂಬಿರುವುದು.

> **ಸರ್ಕಾರ ನೀರಾವರಿ ನಿಗಮ ರದ್ದು ಮಾಡಿ ಮೊದಲಿನಂತೆ ಕಾಲುವೆ ನಿರ್ವಹಣೆ ಮಾಡಬೇಕು. ಕಾಲುವೆಗಳನ್ನು ಅಧಿಕಾರಿಗಳ ಮೂಲಕ ಸ್ವಚ್ಛ ಮಾಡಿಸಿ ಎಲ್ಲ ರೈತರ ಜಮೀನುಗಳಿಗೆ ನೀರು ಮುಟ್ಟಿಸುವ ಜವಾಬ್ದಾರಿ ಸರ್ಕಾರ ವಹಿಸಿಕೊಳ್ಳಬೇಕು.**
> • **ವೀರಬಸಪ್ಪ ಹೂಗಾರ** ಮಹದಾಯಿ ಹೋರಾಟ ವೇದಿಕೆಯ ಅಧ್ಯಕ್ಷ

> **ಚಿಕ್ಕನರಗುಂದದಿಂದ ಕೊಣ್ಣೂರಿನವರೆಗೆ 40 ಕಿಮೀ ಮುಖ್ಯ ಕಾಲುವೆ ಸ್ವಚ್ಛಗೊಳಿಸಲು ಕ್ರಿಯಾಯೋಜನೆ ತಯಾರಿಸಿ ನೀರಾವರಿ ನಿಗಮದಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅನುದಾನ ಬಂದ ತಕ್ಷಣ ಕಾಲುವೆ ಸ್ವಚ್ಛಗೊಳಿಸಲಾಗುವುದು.**
> • **ವೆಂಕನಗೌಡ ಪಾಟೀಲ** ನೀರಾವರಿ ನಿಗಮದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ

ಸಮರ್ಪಕ ರಸಗೊಬ್ಬರ ಪೂರೈಸಿ

ಅವೈಜ್ಞಾನಿಕ ನೀತಿ ಕೈಬಿಡಲು ರೈತ ಮುಖಂಡರ ಆಗ್ರಹ

• **ಕನ್ನಡಪ್ರಭ ವಾರ್ತೆ** ಲಕ್ಷ್ಮೇಶ್ವರ

ಮುಂಗಾರು ಹಂಗಾಮಿನಲ್ಲಿ ರೈತರಿಗ ಸಮರ್ಪಕವಾಗಿ ರಸಗೊಬ್ಬರ ಪೂರೈಕೆ ಮಾಡಬೇಕು. ಒಬ್ಬ ರೈತನಿಗೆ ಒಂದೇ ಚೀಲ ಗೊಬ್ಬರ ಎಂಬ ಅವೈಜ್ಞಾನಿಕ ನೀತಿ ಕೈಬಿಡಬೇಕು. ಈ ಹಿಂದೆ ಯಾವ ಮಾದರಿಯಲ್ಲಿ ರೈತರಿಗೆ ಗೊಬ್ಬರ ಕೊಡುತ್ತಿದ್ದರೋ ಅದೇ ರೀತಿ ಗೊಬ್ಬರ ಪೂರೈಸುವಂತೆ ವಿವಿಧ ರೈತಪರ ಸಂಘಟನೆಗಳ ಒಕ್ಕೂಟದ ಸದಸ್ಯ ರವಿಕಾಂತ ಅಂಗಡಿ ಆಗ್ರಹಿಸಿದರು.

ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಯೂರಿಯಾ ಗೊಬ್ಬರ ಬಗ್ಗೆ ಪೂರೈಸುವಲ್ಲಿ ಸರ್ಕಾರ ಹಿಂದೆ ಮುಂದೆ ನೋಡುತ್ತಿದೆ. ಎಕರೆಗೆ ಒಂದೇ ಚೀಲ ಎಂಬ ನೀತಿ ಕೈಬಿಟ್ಟು ಹೆಚ್ಚು ಗೊಬ್ಬರ ವಿತರಣೆ ಮಾಡಬೇಕು. ಕೃಷಿ ಹಾಗೂ ತೋಟಗಾರಿಕೆ ಇಲಾಖೆಯವರು ರೈತರಿಗೆ ಕೆಲವೇ ಕೆಲವು ಕಂಪನಿ ರಸಗೊಬ್ಬರಗಳ ಬಗ್ಗೆ ರೈತರಿಗೆ ಮಾಹಿತಿ ಕೊಡುತ್ತಾರೆ ಎಂದರು.

ಇನ್ನೂ ಹೆಚ್ಚಿನ ಗೊಬ್ಬರಗಳ ಕಂಪನಿಗಳ ಕುರಿತು ರೈತರಿಗೆ ಮಾಹಿತಿ ಕೊಡಿ, ಯಾವ ಬೆಳೆಗಳಿಗೆ ಯಾವ ರಸಗೊಬ್ಬರ ಹಾಕಬೇಕು ಎಂಬುದು ಸ್ಪಷ್ಟನೆ ಕೊಡಿ, ಕೃಷಿ ಮತ್ತು ತೋಟಗಾರಿಕಾ ಇಲಾಖೆಯವರು ರೈತ ಜನಜಾಗೃತಿ ಬಗ್ಗೆ ದುಡ್ಡನ್ನು ಖರ್ಚು ಮಾಡುತ್ತೀರಿ, ಮುಂಗಾರು ಪ್ರಾರಂಭದ ಪೂರ್ವದಲ್ಲಿ ರೈತರಿಗೆ ಜಾಗೃತಿ ಮೂಡಿಸಬೇಕು ಎಂದು ಅಗ್ರಹಿಸಿದರು.

ಸಮಗ್ರ ರೈತಪರ ಹೋರಾಟ ಸಮಿತಿ ಅಧ್ಯಕ್ಷ ಮಂಜುನಾಥ ಮಾಗಡಿ, ಕೃಷಿಕ ಸಮಾಜ(ನವದೆಹಲಿ) ತಾಲೂಕು ಅಧ್ಯಕ್ಷ ಚನ್ನಪ್ಪ ಷಣ್ಮುಖಿ ಮಾತನಾಡಿ, ಬೆಳೆವಿಮೆ ರೈತರಿಗೆ ಬಂದಿಲ್ಲ. ಆದಷ್ಟು ಬೇಗ ಬೆಳೆ ವಿಮೆ ಬಿಡುಗಡೆ ಮಾಡಬೇಕು. ಎಂಎಸ್‌ಪಿ ಮೂಲಕ ಮಾರಿದ ಬೆಳೆಗಳಿಗೆ ಬೇಗನೆ ಹಣ ಜಮೆ ಮಾಡಬೇಕು. ಮುಂಗಾರು ಬಿತ್ತನೆ ಮಾಡಿಸುವ ಸಲುವಾಗಿ ರಸಗೊಬ್ಬರ ಸಂಗ್ರಹ ಮಾಡಿ ಇಡಬೇಕಾದ ಪರಿಸ್ಥಿತಿವಿದ್ದು, ರೈತರಿಗೆ ಸಮರ್ಪಕವಾಗಿ ವಿತರಣೆ ಮಾಡಬೇಕು ಎಂದರು.

ಪಕ್ಷಾತೀತ ರೈತಪರ ಹೋರಾಟ ವೇದಿಕೆ ಅಧ್ಯಕ್ಷ ಮಹೇಶ ಹೊಗೆಸೊಪ್ಪಿನ ರೈತರ ಸಮಸ್ಯೆ ಬಂದಾಗ ಪಕ್ಷಾತೀತವಾಗಿ ಹೋರಾಟ ಮಾಡಬೇಕಾಗುತ್ತದೆ. ರೈತರ ಹಕ್ಕುಗಳಿಗಾಗಿ ಹೋರಾಟ ಅನಿವಾರ್ಯ. ಶೀಘ್ರದಲ್ಲಿ ತಾಲೂಕಿನ ಕೊನೆಯ ಗ್ರಾಮ ಗೋವನಾಳದಲ್ಲಿನ ರೈತ ಹುತಾತ್ಮರ ಸ್ಮಾರಕಗಳಿಗೆ ಪೂಜೆ ಸಲ್ಲಿಸಿ ರೈತಪರ ಹೋರಾಟಗಾರರು ಪಟ್ಟಣದ ಶಿಗ್ಲಿ ಕ್ರಾಸ್ ನಲ್ಲಿನ ಸಂಗೊಳ್ಳಿ ರಾಯಣ್ಣನ ಪ್ರತಿಮೆ ಎದುರು ಪ್ರತಿಭಟನೆ ನಡೆಸುವ ಮೂಲಕ ತಹಶಿಲ್ದಾರರಿಗೆ ಮನವಿ ಸಲ್ಲಿಸುವ ಕುರಿತು ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು.

ಈ ವೇಳೆ ಬಸವರಾಜ ಹಿರೇಮನಿ, ನೀಲಪ್ಪ ಶೇರಸೂರಿ, ಹೊನ್ನಪ್ಪ ವಡ್ಡರ, ಟಾಕಪ್ಪ ಸಾತಪುತೆ ಮಾತನಾಡಿದರು. ನಾಮದೇವ ಮಾಂಡ್ರೆ, ಸಂಜೀವ ಹುಡೇದ, ಟಾಕಪ್ಪ ಸಾತಪುತೆ, ಬಸವರಾಜ ಜಾಲಗಾರ, ಮಂಜುನಾಥ ಮುಳಗುಂದ, ಶಂಕರ ಬ್ಯಾಡಗಿ, ವೀರಣ್ಣ ಕಟಗಿ, ಪವನ ಬಂಕಾಪುರ, ಮುತ್ತಣ್ಣ ನೀರಲಗಿ, ಮಲ್ಲಿಕಾರ್ಜುನ ನೀರಾಲೋಟ, ರಾಜು ಗುಡಗೇರಿ, ಎಸ್.ಎಸ್. ತಾರಿಕೊಪ್ಪ, ಪದ್ಮನಗೌಡ ಪಾಟೀಲ, ಫಕ್ಕಿರಪ್ಪ ಕುಸಲಾಪುರ, ನಾಗನಗೌಡ ಪಾಟೀಲ್, ಮಂಜನಾಥಗೌಡ ಸಂದಿಗೋಡ, ಮಹಾಂತೇಶ ಉಮಚಗಿ ಇದ್ದರು.

- ರೈತರಿಗೆ ಸಿಗುವ ಸೌಲಭ್ಯಗಳು ನೇರವಾಗಿ ರೈತರಿಗೆ ಮುಟ್ಟಿಸುವ ಕೆಲಸ ಆಗಬೇಕು. ಕೃಷಿ ಹಾಗೂ ತೋಟಗಾರಿಕೆ ಇಲಾಖೆಯಲ್ಲಿ ಏಜೆಂಟರ ಹಾವಳಿ ಹೆಚ್ಚಾಗಿದ್ದು, ಅದನ್ನು ನಿಯಂತ್ರಣ ಮಾಡಬೇಕು
- ಶಿರಹಟ್ಟಿ ಮತಕ್ಷೇತ್ರದಲ್ಲಿ ಬೆಳೆವಿಮೆ ಮಾಡುವಲ್ಲಿ ಜಿಪಿಎಸ್ ಮಿಸ್ ಮ್ಯಾಚ್ ಆಗಿ ಸಾವಿರಾರು ರೈತರಿಗೆ ವಿಮಾ ಸಿಗುತ್ತಿಲ್ಲ. ಮಿಸ್ ಮ್ಯಾಚ್ ಮಾಡಿದ ವ್ಯಕ್ತಿಗಳ ಮೇಲೆ ಕ್ರಮ ಕೈಗೊಳ್ಳಲು ಆಗ್ರಹ

ಬ್ಯಾಂಕ್‌ಗಳಲ್ಲಿ ಅಗತ್ಯ ಸಿಬ್ಬಂದಿ ನೇಮಕಕ್ಕೆ ಆಗ್ರಹ

• **ಕನ್ನಡಪ್ರಭ ವಾರ್ತೆ** ಗದಗ

ಬ್ಯಾಂಕ್ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಆಲ್ ಇಂಡಿಯಾ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸ್ಟಾಫ್ ಫೆಡರೇಷನ್ ವತಿಯಿಂದ ಮೇ 25 ಮತ್ತು 26ರಂದು ಮುಷ್ಕರ ನಡೆಯಲಿದ್ದು, ಅದರ ಅಂಗವಾಗಿ ಶುಕ್ರವಾರ ಸಾಂಕೇತಿಕವಾಗಿ ನಗರದ ಮುಳಗುಂದ ನಾಕಾ ಹತ್ತಿರದ ಎಸ್‌ಬಿಐ ಬ್ಯಾಂಚ್ ಮುಂದೆ ಪ್ರತಿಭಟನೆ ನಡೆಸಲಾಯಿತು.

ದೀರ್ಘಕಾಲದ ತಾಳ್ಮೆಯ ಪ್ರಯತ್ನಗಳ ನಂತರವೂ ಬ್ಯಾಂಕ್ ಆಡಳಿತಮಂಡಳಿಯು ನೌಕರರ ನ್ಯಾಯಸಮ್ಮತ ಬೇಡಿಕೆಗಳನ್ನು ನಿರ್ಲಕ್ಷಿಸಿರುವುದರಿಂದ, ಅನಿವಾರ್ಯವಾಗಿ ಮುಷ್ಕರಕ್ಕೆ ಕರೆ ನೀಡಲಾಗಿದೆ. ಸಿಬ್ಬಂದಿ ನೇಮಕಾತಿ, ಮೆಸೆಂಜರ್‌ಗಳು ಮತ್ತು ಶಸ್ತ್ರಸಜ್ಜಿತ ರಕ್ಷಕರ ತಕ್ಷಣದ ನೇಮಕಾತಿ ಹಾಗೂ ಒಟ್ಟಾರೆ ಸಿಬ್ಬಂದಿ ಕೊರತೆ ನೀಗಿಸಲು ಕ್ರಮ ಕೈಗೊಳ್ಳಬೇಕು.

2019ರಿಂದ ಸೇರ್ಪಡೆಯಾದ ನೌಕರರಿಗೆ ಇಂಟರ್ ಸರ್ಕಲ್ ಟ್ರಾನ್ಸಫರ್‌ಗಳನ್ನು ಜಾರಿಗೆ ತರಬೇಕು. ಕಾಯಂ ಹುದ್ದೆಗಳನ್ನು ಹೊರಗುತ್ತಿಗೆ ನೀಡುವುದನ್ನು ನಿಲ್ಲಿಸಬೇಕು. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದೊಳಗೆ ಇರುವ ವೇತನ ತಾರತಮ್ಯದ ಸಮಸ್ಯೆಗಳನ್ನು ಬಗೆಹರಿಸಬೇಕು.

ಎನ್‌ಪಿಎಸ್ ವ್ಯಾಪ್ತಿಯ ನೌಕರರಿಗೆ ಪಿಂಚಣಿ ನಿಧಿ ನಿರ್ವಹಣೆಯಲ್ಲಿ ಆಯ್ಕೆ ನೀಡಬೇಕು. ವೈದ್ಯಕೀಯ ಮರುಪಾವತಿ ಯೋಜನೆಯಲ್ಲಿ ಸುಧಾರಣೆ ತರಬೇಕೆಂದು ಒತ್ತಾಯಿಸಲಾಯಿತು. ಈ ವೇಳೆ ಸಹಾಯಕ ಪ್ರಧಾನ ಕಾರ್ಯದರ್ಶಿ ಅಮರೇಶ ಕೆ., ಪ್ರೇಮಕುಮಾರ, ಎಸ್.ಪಿ. ರಜಪೂತ, ಸೃಜನ್, ವಿಜಯಲಕ್ಷ್ಮೀ ಅಂಗಡಿ, ಅಕ್ಷತಾ, ನೇಹಾ ಮುಂತಾದವರು ಇದ್ದರು.



ವಿವಿಧ ಬೇಡಿಕೆಗಳ ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಗದಗ: ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ 2025-26ನೇ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಶೇ. 70ಕ್ಕಿಂತಲೂ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಯಲಿದೆ.

ಅದೇ ರೀತಿ ನಿವೃತ್ತ ನೌಕರ ಸದಸ್ಯರಿಗೆ ಸನ್ಮಾನ ಮತ್ತು ವಿಶ್ವಕರ್ಮ ಭವನ, ವಿದ್ಯಾರ್ಥಿವಸತಿನಿಲಯಗಳ ಕಟ್ಟಡಕ್ಕೆ ದೇಣಿಗೆ ನೀಡಿದ ಮಹಾದಾನಿಗಳ ಫೋಟೋ ಅನಾವರಣ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳ ವಿಶ್ವಕರ್ಮ ಸಮಾಜದ ನೌಕರ ಸಂಘಗಳ ಅಧ್ಯಕ್ಷರರ ಸನ್ಮಾನ ಸಮಾರಂಭ ಮೇ 24ರಂದು ಬೆಳಗ್ಗೆ 9.30ಕ್ಕೆ ನಗರದ ವಿಶ್ವಕರ್ಮ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಪಿಯುಸಿ ವಿಭಾಗ ಕೆ.ಎಸ್. ಬಡಿಗೇರ ಮೊ. 9482176166, ಆರ್.ಎಂ. ಬಡಿಗೇರ ಮೊ. 9916765934, ವಿಜಯಕುಮಾರ ರಾಜನಾಳ ಮೊ. 9341804366 ಹಾಗೂ ಎಸ್ಸೆಸ್ಸೆಲ್ಸಿ ವಿಭಾಗ ಚಿದಾನಂದ ಎಂ. ಪತ್ತಾರ ಮೊ. 944918779 ಸಂಪರ್ಕಿಸಲು ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಕಡ್ಲಿಕೊಪ್ಪ ಹಾಗೂ ಪ್ರಧಾನ ಕಾರ್ಯದರ್ಶಿ ಡಾ. ಸಿ.ವಿ. ಬಡಿಗೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪೇಪರ್‌ಲೆಸ್ ನೋಂದಣಿ ಕೈಬಿಡಲು ಸರ್ಕಾರಕ್ಕೆ ಆಗ್ರಹ

• **ಕನ್ನಡಪ್ರಭ ವಾರ್ತೆ** ಶಿರಹಟ್ಟಿ



ರಾಜ್ಯ ಸರ್ಕಾರ ಕಾವೇರಿ ತಂತ್ರಾಂಶ ಮೂಲಕ ಆರಂಭಿಸಿರುವ ಪೇಪರ್‌ಲೆಸ್ ಡಿಜಿಟಲ್ ನೋಂದಣಿ ಕೈಬಿಡದಿದ್ದರೆ ಹೋರಾಟಕ್ಕೆ ಮುಂದಾಗುವುದಾಗಿ ಶಿರಹಟ್ಟಿ ತಾಲೂಕು ಪತ್ರ ಬರಹಗಾರರ ಸಂಘದ ಅಧ್ಯಕ್ಷ ಅಶೋಕ ಹುಬ್ಬಳ್ಳಿ ಎಚ್ಚರಿಸಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿ, ಆಸ್ತಿ ನೋಂದಣಿ ದಾಖಲಾತಿಗಳು ಡಿಜಿ ಲಾಕರ್‌ನಲ್ಲಿ ಸೇವ್ ಆಗುವುದರಿಂದ ಆಸ್ತಿ ಖರೀದಿದಾರರಿಗೆ ನಿಖರ ದಾಖಲೆಗಳು ಸಿಗುವುದಿಲ್ಲ. ಪೇಪರ್ ಲೆಸ್ ಮಾಡುವ ಮೂಲಕ ಭೂ ಮಾಫಿಯಾಕ್ಕೆ ಅನುಕೂಲ ಕಲ್ಪಿಸಿಕೊಟ್ಟಂತೆ ಆಗುತ್ತದೆ. ಪೇಪರ್‌ಲೆಸ್ ನೋಂದಣಿ ಕಾರ್ಯದಿಂದ ಯಾರ ಆಸ್ತಿ ಯಾರು ಖರೀದಿ ಮಾಡಿದ್ದಾರೆ? ಯಾರು ಮಾರಾಟ ಮಾಡಿದ್ದಾರೆ ಎಂಬುದೇ ಗೊತ್ತಾಗುವುದಿಲ್ಲ ಎಂದರು.

ಸಾರ್ವಜನಿಕರು ಹಾಗೂ ವಿವಿಧ ಸಂಘಟನೆಗಳು ಪೇಪರ್ ಲೆಸ್ ನೋಂದಣಿ ವ್ಯವಸ್ಥೆಯನ್ನು ಕೈಬಿಡುವಂತೆ ಸರ್ಕಾರವನ್ನು ಆಗ್ರಹಿಸಿದ್ದು, ತಾಂತ್ರಿಕ ಸಮಸ್ಯೆಗಳು, ಗ್ರಾಮೀಣ ಭಾಗಗಳಲ್ಲಿ ಇಂಟರ್‌ನೆಟ್ ಕೊರತೆ ಹಾಗೂ ಸಾಮಾನ್ಯ ಜನರಿಗೆ ಆಗುತ್ತಿರುವ ತೊಂದರೆಗಳನ್ನು ಉಲ್ಲೇಖಿಸಿ ಹಳೆಯ ಪದ್ಧತಿಯನ್ನು ಮುಂದುವರಿಸುವಂತೆ ಒತ್ತಾಯಿಸಿದ ಅವರು, ಸರ್ಕಾರದ ಕ್ರಮ ಅನಕ್ಷರಸ್ಥರಿಗೆ ತೀವ್ರ ತೊಂದರೆ ತಂದೊಡ್ಡುತ್ತಿದೆ ಎಂದರು.

ಕೂಡಲೇ ಸರ್ಕಾರ ಪೇಪರ್‌ಲೆಸ್ ಜಾರಿಯನ್ನು ತಡೆಹಿಡಿಯಬೇಕು. ಪೇಪರ್‌ಲೆಸ್‌ನಿಂದ ಆಸ್ತಿ ಮಾರುವವರು, ಆಸ್ತಿ ಖರೀದಿದಾರರು, ಅಧಿಕಾರಿಗಳ ಸಹಿ ಕೂಡ ಬೇಕಾಗಿಲ್ಲ. ಹೀಗಾಗಿ ಆಸ್ತಿ ವಿಚಾರದಲ್ಲಿ ಮುಂದೆ ಬಹುದೊಡ್ಡ ಅನಾಹುತ ಆಗುವ ಸಾಧ್ಯತೆಗಳಿವೆ. ಡಿಜಿಟಲ್ ನೋಂದಣಿ ಕಾರ್ಯ ಜಾರಿ ಮಾಡಿದಲ್ಲಿ ರಾಜ್ಯದಲ್ಲಿರುವ ಸಾವಿರಾರು ದಸ್ತ ಬರಹಗಾರರು ನಿರುದ್ಯೋಗಿಗಳಾಗಲಿದ್ದಾರೆ.

ಸರ್ಕಾರ ತಕ್ಷಣ ಈ ಕ್ರಮವನ್ನು ಕೈಬಿಡದಿದ್ದಲ್ಲಿ ಹೋರಾಟ ಅನಿವಾರ್ಯವಾಗಿದೆ. ಈ ಕುರಿತು ರಾಜ್ಯದ ಎಲ್ಲ ದಸ್ತ ಬರಹಗಾರರೊಂದಿಗೆ ಚರ್ಚಿಸಿ ಮುಂದಿನ ಹೋರಾಟದ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ಅಶೋಕ ಹುಬ್ಬಳ್ಳಿ ತಿಳಿಸಿದರು.

ರೈತರಿಗೆ ಸಲಹೆ... ಭೂಮಿತಾಯಿ ರಕ್ಷಣೆ ಕಣ್ಗಾವಲು ಸಮಿತಿ ಸಭೆಯಲ್ಲಿ ಚೇತನಾ ಪಾಟೀಲ ಮನವಿ

ರಾಸಾಯನಿಕ ಗೊಬ್ಬರ ಬಿಡಿ, ಸಾವಯವ ವಿಧಾನ ಅನುಸರಿಸಿ

• **ಕನ್ನಡಪ್ರಭ ವಾರ್ತೆ** ಶಿರಹಟ್ಟಿ

ರೈತರು ರಾಸಾಯನಿಕ ಗೊಬ್ಬರ ಬದಲು ಸಾವಯವ ಗೊಬ್ಬರ ಬಳಕೆ ಮಾಡಬೇಕು. ನೈಸರ್ಗಿಕ ಗೊಬ್ಬರ ಮಾರುಕಟ್ಟೆಗಳಲ್ಲಿ ಲಭ್ಯವಿದೆ. ಸಮತೋಲಿತವಾಗಿ ರೈತರು ಗೊಬ್ಬರ ಬಳಸಲು ಜಿಲ್ಲಾ ಜಂಟಿ ಕೃಷಿ ನಿರ್ದೇಶರಾದ ಚೇತನಾ ಪಾಟೀಲ ತಿಳಿಸಿದರು.

ತಾಲೂಕಿನ ರಣತೂರ ಗ್ರಾಮ ಪಂಚಾಯಿತಿಯಲ್ಲಿ ಕೃಷಿ ಇಲಾಖೆ ವತಿಯಿಂದ ಏರ್ಪಡಿಸಿದ್ದ ಭೂಮಿತಾಯಿ ರಕ್ಷಣೆ ಕಣ್ಗಾವಲು ಸಮಿತಿ ಸಭೆಯಲ್ಲಿ ಮಾತನಾಡಿ, ಕೇವಲ ಡಿಎಪಿ ಮತ್ತು ಯೂರಿಯಾ ಗೊಬ್ಬರಗಳಿಗೆ ಸೀಮಿತಗೊಳಿಸದೇ ಕಾಂಪ್ಲೆಕ್ಸ್ ಗೊಬ್ಬರ ಉಪಯೋಗಿಸಿಕೊಳ್ಳಬೇಕು. ಸಾವಯವ ಗೊಬ್ಬರಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಉಪಯೋಗಿಸಿಕೊಳ್ಳಬೇಕು ಎಂದರು.

ಲಘು ಪೋಷಕಾಂಶಗಳ ಬಗ್ಗೆ ರೈತರು ಅರಿತುಕೊಳ್ಳಬೇಕು. ರಾಸಾಯನಿಕ ಗೊಬ್ಬರ ಬಳಕೆಯಿಂದ ಭೂಮಿ ಬರಡಾಗಲಿದೆ ಎಂದು ಗೊಬ್ಬರ ಕಂಡುಹಿಡಿದ ವಿಜ್ಞಾನಿಗಳೇ ಹೇಳಿದ್ದಾರೆ. ರಾಸಾಯನಿಕ ಗೊಬ್ಬರ ಬಳಕೆಯಿಂದ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವುದರಿಂದ ರೈತರು ರಾಸಾಯನಿಕ ಗೊಬ್ಬರ ಕೈಬಿಟ್ಟು ಸಾವಯವ ಗೊಬ್ಬರ ಬಳಕೆಗೆ ಮುಂದಾಗಬೇಕು ಎಂದರು.

ಸಾವಯವ ಕೃಷಿ ಮಹತ್ವ ಸಾರುತ್ತಿರುವ ರೈತರು ಆಧುನಿಕ ಕೃಷಿ ಪದ್ಧತಿಗೆ ಶರಣಾಗಿ ಸಾಲಸೋಲ ಮಾಡಿ ಬೆಳೆ ಬೆಳೆದು ನಿರೀಕ್ಷಿತ ಮಟ್ಟದಲ್ಲಿ ಇಳುವರಿ ಬಾರದಿದ್ದಾಗ ಹತಾಶರಾಗಿ ಹೆಚ್ಚು ಹೆಚ್ಚು ಆತ್ಮಹತ್ಯೆಗೆ ಶರಣಾಗುತ್ತಿರುವುದು ಹೊಸತಲ್ಲ. ಇದಕ್ಕೆಲ್ಲ ಕಾರಣ ರಾಸಾಯನಿಕ ಪದಾರ್ಥಗಳ ಬಳಕೆ. ಪ್ರಸ್ತುತ ದಿನದಲ್ಲಿ ಅನ್ನ ಕೊಡುವ ಭೂಮಿತಾಯಿಗೆ ವಿಷ ಕೊಡುವ ಕೆಲಸ ಮಾಡುತ್ತಿದ್ದು, ಇದನ್ನು ಬಿಟ್ಟು ಸಾವಯವ ಕೃಷಿಗೆ ಆದ್ಯತೆ ನೀಡಬೇಕು ಎಂದರು.

ಸಾವಯವ ಕೃಷಿಯಲ್ಲಿ ಸಾಧನೆ ಮಾಡಿದ ರೈತ ಬಸವರಾಜ ನಾವಿ ಮಾತನಾಡಿ, ಎರೆಹುಳು ಗೊಬ್ಬರ ಬಳಕೆಗೆ ಹೆಚ್ಚು ಒತ್ತು ನೀಡುವುದರಿಂದ ಉತ್ತಮ ಇಳುವರಿ ಬರುವುದಲ್ಲದೇ ಭೂ ಫಲವತ್ತತೆ ಯಥಾಸ್ಥಿತಿಯಾಗಿರುತ್ತದೆ. ರಾಸಾಯನಿಕ ಗೊಬ್ಬರಗಳಿಗೆ ಹೆಚ್ಚು ಹಣ ನೀಡುವುದರ ಬದಲಿಗೆ ಅದರ ಅರ್ಧದಷ್ಟು ಹಣವನ್ನು ಸಾವಯವ ಗೊಬ್ಬರಗಳಿಗೆ ಖರ್ಚು ಮಾಡಿದರೆ ಉತ್ತಮ ಫಸಲು ಪಡೆಯಬಹುದು ಎಂದರು.

ಜಿಲ್ಲಾ ಉಪ ಕೃಷಿ ನಿರ್ದೇಶಕರಾದ ಸ್ಫೂರ್ತಿ ಅವರು ಪ್ರಾತ್ಯಕ್ಷಿಕೆ ಮೂಲಕ ಬೀಜೋಪಚಾರ ಮಾಡುವ ವಿಧಾನ ಮತ್ತು ಬೀಜೋಪಚಾರ ಮಾಡುವುದರಿಂದ ಹೆಸರು, ಕಡಲೆ, ತೊಗರಿ ಬೆಳೆಗಳಲ್ಲಿ ಬೇರು ಕೊಳೆಯುವ ರೋಗವನ್ನು ತಡೆಗಟ್ಟಬಹುದು ಎನ್ನುವ ಕುರಿತು ರೈತರಿಗೆ ತಿಳಿಸಿದರು.

ತಾಲೂಕು ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ ಭೂಮಿತಾಯಿ ರಕ್ಷಣೆ ಕಣ್ಗಾವಲು ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಕೃಷಿ ಅಧಿಕಾರಿ ಆರ್.ಸಿ. ಚಾಕಲಬ್ಬಿ ಹಾಗೂ ಸಿಬ್ಬಂದಿ ವರ್ಗ ಮತ್ತು ಗ್ರಾಮದ ರೈತರು, ರೈತ ಮಹಿಳೆಯರು ಉಪಸ್ಥಿತರಿದ್ದರು.



ಶಿರಹಟ್ಟಿ ತಾಲೂಕಿನ ರಣತೂರ ಗ್ರಾಮ ಪಂಚಾಯಿತಿಯಲ್ಲಿ ಭೂಮಿ ತಾಯಿ ರಕ್ಷಣೆ ಕಣ್ಗಾವಲು ಸಮಿತಿ ಸಭೆಯಲ್ಲಿ ಜಿಲ್ಲಾ ಜಂಟಿ ಕೃಷಿ ನಿರ್ದೇಶರಾದ ಚೇತನಾ ಪಾಟೀಲ ಮಾತನಾಡಿದರು.

- ಲಘು ಪೋಷಕಾಂಶಗಳ ಬಗ್ಗೆ ರೈತರು ಅರಿತುಕೊಳ್ಳಬೇಕು. ರಾಸಾಯನಿಕ ಗೊಬ್ಬರ ಬಳಕೆಯಿಂದ ಭೂಮಿ ಬರಡಾಗಲಿದೆ ಎಂದು ವಿಜ್ಞಾನಿಗಳೇ ಹೇಳಿದ್ದಾರೆ
- ರಾಸಾಯನಿಕ ಗೊಬ್ಬರ ಬಳಕೆಯಿಂದ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವುದರಿಂದ ರೈತರ್ರು ಸಾವಯವ ಗೊಬ್ಬರ ಬಳಸಬೇಕು

ಬರಹಗಾರರು ಅಧ್ಯಯನಶೀಲರಾಗಬೇಕು. ಇತರ ಬರಹಗಾರರ ಸಾಹಿತ್ಯವನ್ನು ಓದುವ ಒಳ್ಳೆಯದನ್ನು ಸ್ವೀಕರಿಸುವ ಹಾಗೂ ಆಗತ್ಯವಿದ್ದಲ್ಲಿ ಸೂಕ್ತ ಮಾರ್ಗದರ್ಶನ ನೀಡಿ ಉತ್ತಮ ಸಾಹಿತ್ಯ ರಚನೆಗೆ ಪ್ರೇರಣೆ ನೀಡಬೇಕು. ಅಂದಾಗ ಸಾಹಿತ್ಯ ಸಂವರ್ಧಿಸುವುದು.

• **ಶಿವಶಾಂತಾ ಬಿಸನಳ್ಳಿ** ಸಾಹಿತಿ

ಸುದ್ದಿ ಸಿಂಚನ

ಇಂದಿನಿಂದ ಎರಡು ದಿನ ಮಕ್ಕಳ ಸಾಹಿತ್ಯ ಸಮ್ಮೇಳನ

ಗದಗ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಎಂ.ಎಸ್. ಹುಲ್ಲೂರ ಹೈಟೆಕ್ ಕೋಚಿಂಗ್ ಸೆಂಟರ್ ಸಹಯೋಗದಲ್ಲಿ ಎರಡು ದಿನಗಳ ಕಾಲ ಮಕ್ಕಳ ಸಾಹಿತ್ಯ ಸಮ್ಮೇಳನ ಮೇ 9 ಹಾಗೂ 10ರಂದು ನಗರದ ವಿಜಯ ಲಲಿತಕಲಾ ಮಹಾವಿದ್ಯಾಲಯ ರಾಜೀವಗಾಂಧಿ ನಗರದಲ್ಲಿ ಜರುಗಲಿದೆ. ಸಮ್ಮೇಳನದಲ್ಲಿ ಮಕ್ಕಳ ಸಾಹಿತ್ಯ ಬೆಳವಣಿಗೆ ವಿಷಯವಾಗಿ ಮಕ್ಕಳ ಸಾಹಿತಿಗಳೊಂದಿಗೆ ಚರ್ಚೆ ಹಾಗೂ ಮಕ್ಕಳಿಗೆ ಪ್ರಾಯೋಗಿಕ ಸಾಹಿತ್ಯ ಚಟುವಟಿಕೆಗಳು ಜರುಗಲಿವೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ರೇಶನ್ ಕಾರ್ಡ್ ತಿದ್ದುಪಡಿ, ಸೇರ್ಪಡೆಗೆ ಅವಕಾಶ



ಗದಗ: ಬಿಪಿಎಲ್, ಎಪಿಎಲ್ ಹಾಗೂ ಅಂತ್ಯೋದಯ ಕಾರ್ಡ್ ಹೊಂದಿರುವ ಫಲಾನುಭವಿಗಳು ಪಡಿತರ ಚೀಟಿ ತಿದ್ದುಪಡಿ ಹಾಗೂ ಸೇರ್ಪಡೆಗೆ ಸರ್ಕಾರ ಅವಕಾಶ ಕಲ್ಪಿಸಿದ್ದು, 2027ರ ಮಾ. 31ರೊಳಗಾಗಿ ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಕ್ಕೆ ಭೇಟಿ ನೀಡಬಹುದು ಎಂದು ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸದಸ್ಯರ ಹೆಸರು ಸೇರ್ಪಡೆ- ತಿದ್ದುಪಡಿ, ಕುಟುಂಬ ಮುಖ್ಯಸ್ಥರ ಬದಲಾವಣೆ, ಸದಸ್ಯರ ಫೋಟೋ ಅಪ್‌ಡೇಟ್, ವಿಳಾಸ ಬದಲಾವಣೆ, ರೇಷನ್ ಅಂಗಡಿ ಬದಲಾವಣೆ ಹಾಗೂ ಹೆಸರು ಡಿಲೀಟ್ ಮಾಡಲು ಬಯಸುವ ಅರ್ಹ ಫಲಾನುಭವಿಗಳಿಗೆ ತಿದ್ದುಪಡಿ ಹಾಗೂ ಸೇರ್ಪಡೆಗೆ ಅವಕಾಶ ಕಲ್ಪಿಸಲಾಗಿದೆ. ಮದುವೆಯಾದ ಹೆಣ್ಣುಮಕ್ಕಳನ್ನು ಮತ್ತು ಮರಣ ಹೊಂದಿದ ಸದಸ್ಯರನ್ನು ಮಾತ್ರ ರೇಷನ್ ಕಾರ್ಡಿನಿಂದ ಡಿಲಿಟ್ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಬಿಪಿಎಲ್ ಹೊಸ ಪಡಿತರ ಚೀಟಿಗೆ ಅರ್ಜಿ ಆಹ್ವಾನ

ಗದಗ: ವೈದ್ಯಕೀಯ ತುರ್ತು ಚಿಕಿತ್ಸೆಯ ನೆರವಿಗಾಗಿ ಬಿಪಿಎಲ್ ಹೊಸ ಪಡಿತರ ಚೀಟಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅರ್ಜಿ ಸಲ್ಲಿಸಲು 2027 ಮಾ. 31ರ ವರೆಗೆ ಕಾಲಾವಕಾಶ ನೀಡಲಾಗಿದ್ದು, ಅರ್ಹ ಫಲಾನುಭವಿಗಳು ಹತ್ತಿರದ ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಕ್ಕೆ ಭೇಟಿ ನೀಡಿ ಬೆಳಗ್ಗೆ 10ರಿಂದ ಸಂಜೆ 5ರೊಳಗಾಗಿ ಅರ್ಜಿ ಸಲ್ಲಿಸಬಹುದು. ವೈದ್ಯಕೀಯ ತುರ್ತು ಚಿಕಿತ್ಸೆಗಾಗಿ ಬಿಪಿಎಲ್ ಹೊಸ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಬಯಸುವ ಅರ್ಹ ಫಲಾನುಭವಿಗಳು ಎಲ್ಲ ಸದಸ್ಯರ ಆಧಾರ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, 6 ವರ್ಷದೊಳಗಿನ ಮಕ್ಕಳ ಜನನ ಪ್ರಮಾಣ ಪತ್ರ ದಾಖಲೆಗಳೊಂದಿಗೆ ಎಲ್ಲ ಸದಸ್ಯರು ಹೆಬ್ಬೆಟ್ಟು ಕೊಡಬೇಕು ಎಂದು ತಿಳಿಸಿದ್ದಾರೆ.

ವಿದ್ಯಾಭ್ಯಾಸಕ್ಕಾಗಿ ಸಾಲ ಪಡೆಯಲು ಅರ್ಜಿ

ಗದಗ: ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ 2026- 27ನೇ ಸಾಲಿಗೆ ಅಲ್ಪಸಂಖ್ಯಾತರಾದ(ಕ್ರಿಶ್ಚಿಯನ್ ಸಮುದಾಯವನ್ನು ಹೊರತುಪಡಿಸಿ) ಮುಸ್ಲಿಂ, ಜೈನ್, ಭೌದ್ಧ, ಸಿಖ್ಖ, ಫಾರ್ಸಿ ಜನಾಂಗದವರಿಗೆ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯಡಿ ಸಾಲ ಸೌಲಭ್ಯಗಳನ್ನು ಪಡೆಯಲು ಮೇ 8ರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವೆಬ್‌ಸೈಟ್ https://kmdconline.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಮೇ 30 ಕೊನೆಯ ದಿನ. ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಸಂಬಂಧಿಸಿದ ಎಲ್ಲ ದಾಖಲಾತಿಗಳನ್ನು ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಮೌಲಾನಾ ಆಜಾದ ಅಲ್ಪಸಂಖ್ಯಾತರ ಭವನ 1ನೇ ಮಹಡಿ ಜಿಲ್ಲಾ ನ್ಯಾಯಲಯದ ಎದುರುಗಡೆ, ಹುಬ್ಬಳ್ಳಿ ರಸ್ತೆ, ಗದಗ ಈ ಕಚೇರಿಗೆ ಸಲ್ಲಿಸಬಹುದು. ದೂ. 08372-295147 ಸಂಪರ್ಕಿಸಬಹುದು ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಪ್ರಕಟಣೆಯಲ್ಲಿ ತಿಳಿಸಿದೆ.

ಜಿಲ್ಲಾ ಕಸಾಪ ವತಿಯಿಂದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಾಹಿತಿ ಬಸವರಾಜ ಬಾಳೇಶ್ವರಮಠ

ಕನ್ನಡ ಪ್ರಜ್ಞೆ ಬೆಳೆಸುತ್ತಿರುವ ಸಾಹಿತ್ಯ ಪರಿಷತ್

• **ಕನ್ನಡಪ್ರಭ ವಾರ್ತೆ** ಗದಗ

ಕನ್ನಡಿಗರು ಅಭಿಮಾನ ಶೂನ್ಯರಾಗದೇ ಭಾಷೆಯ ಅಭಿವೃದ್ಧಿಗೆ ಕೈಜೋಡಿಸಬೇಕು. ಈ ದಿಸೆಯಲ್ಲಿ ಕನ್ನಡ, ಕನ್ನಡಿಗ, ಕರ್ನಾಟಕದ ಸಮಗ್ರ ಏಳ್ಗೆಯೇ ಕಾರ್ಯ ಮಾಡುತ್ತಿರುವ ಪರಿಷತ್ತಿನ ನಡೆ ಮಾದರಿಯಾದುದು ಎಂದು ಸಾಹಿತಿ ಬಸವರಾಜ ಬಾಳೇಶ್ವರಮಠ ತಿಳಿಸಿದರು.

ನಗರದ ಡಿ.ಜಿ. ಮೇಲ್ಮಾಳಗಿ ಆಯುರ್ವೇದ ಮಹಾವಿದ್ಯಾಲಯದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಜರುಗಿದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಾಹಿತ್ಯ, ಸಂಸ್ಕೃತಿ ಸಂವರ್ಧನೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಪಾತ್ರ ಕುರಿತು ಮಾತನಾಡಿದರು.

ಕನ್ನಡ, ಕನ್ನಡಿಗ, ಕರ್ನಾಟಕ ವಿಷಯಕ್ಕೆ ಸಂಬಂಧಿಸಿದಂತೆ ಪೂರಕ ಕಾರ್ಯಕ್ರಮಗಳನ್ನು ಹಾಗೂ ಹೋರಾಟಗಳನ್ನು ರೂಪಿಸಿಕೊಂಡು ಬಂದು ಕನ್ನಡಿಗರಲ್ಲಿ ಕನ್ನಡದ ಪ್ರಜ್ಞೆಯನ್ನು ಸದಾ ಜೀವಂತವಾಗಿರುವ ಕಾರ್ಯವನ್ನು ಪರಿಷತ್ತು ಶತಮಾನದಿಂದ ಮಾಡುತ್ತಾ ಬಂದಿದೆ.

ಕರ್ನಾಟಕ ಏಕೀಕರಣ ಮತ್ತು ನಾಮಕರಣದಲ್ಲಿ ಪರಿಷತ್ತಿನ ಪಾತ್ರ ಮಹತ್ವದ್ದಾಗಿದೆ. ಜಿಲ್ಲೆ ಪರಿಷತ್ತಿನ ಕಾರ್ಯಗಳು ಮಾದರಿಯಾಗಿವೆ ಎಂದರು.



ಕಾರ್ಯಕ್ರಮವನ್ನು ಪ್ರಾ. ಸಂತೋಷ ಬೆಳವಡಿ ಉದ್ಘಾಟಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಡಿಜಿಎಂ ಆಯುರ್ವೇದ ಮಹಾವಿದ್ಯಾಲಯದ ಪ್ರಾ. ಸಂತೋಷ ಬೆಳವಡಿ ಮಾತನಾಡಿ, ಕನ್ನಡಿಗರು ಸ್ವಾಭಿಮಾನವನ್ನು ಹೊಂದಿ ಕನ್ನಡದ ಬೆಳವಣಿಗೆಗೆ ಶ್ರಮಿಸಬೇಕು. ಉನ್ನತ ಶಿಕ್ಷಣದ ಪಠ್ಯಗಳು ಕನ್ನಡದಲ್ಲಿ ದೊರೆಯುವಂತೆ ಮಾಡುವ ಮೂಲಕ ಬೇರೆ ಭಾಷೆಗಳ ಅನಿವಾರ್ಯತೆಯನ್ನು ಕಡಿಮೆಗೊಳಿಸಬಹುದು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ,

> **ಕನ್ನಡ, ಕನ್ನಡಿಗ, ಕರ್ನಾಟಕ ವಿಷಯಕ್ಕೆ ಸಂಬಂಧಿಸಿದಂತೆ ಪೂರಕ ಕಾರ್ಯಕ್ರಮಗಳನ್ನು ಹಾಗೂ ಹೋರಾಟಗಳನ್ನು ರೂಪಿಸಿಕೊಂಡು ಬಂದು ಕನ್ನಡಿಗರಲ್ಲಿ ಕನ್ನಡದ ಪ್ರಜ್ಞೆಯನ್ನು ಸದಾ ಜೀವಂತವಾಗಿರುವ ಕಾರ್ಯವನ್ನು ಪರಿಷತ್ತು ಶತಮಾನದಿಂದ ಮಾಡುತ್ತಾ ಬಂದಿದೆ.**
> • **ಬಸವರಾಜ ಬಾಳೇಶ್ವರಮಠ** ಸಾಹಿತಿ

ಕರ್ನಾಟಕ ಏಕೀಕರಣದ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಸಮ್ಮೇಳನ, ಪುಸ್ತಕ ಪ್ರಕಟಣೆ, ಕಾರ್ಯಾಗಾರಗಳ ಮೂಲಕ ಕನ್ನಡಿಗರಲ್ಲಿ ಜಾಗೃತಿಯನ್ನು ಮೂಡಿಸುವ ಕಾರ್ಯವನ್ನು ಮಾಡಿದೆ ಎಂದರು.

ಕನ್ನಡ ನಾಡು ನುಡಿ, ನೆಲ ಜಲದ ಪ್ರಶ್ನೆ ಬಂದಾಗ ಪರಿಷತ್ ಮುಂಚೂಣಿಯಲ್ಲಿ ನಿಂತು ಕನ್ನಡಿಗರಿಗೆ ನ್ಯಾಯ ಒದಗಿಸುವ ಕಾರ್ಯ ಮಾಡುತ್ತಿದೆ. ಕನ್ನಡಿಗರೆಲ್ಲ ಪರಿಷತ್ತಿನ ಸದಸ್ಯರಾಗುವ ಮೂಲಕ ಶಕ್ತಿಯನ್ನು ಇಮ್ಮಡಿಗೊಳಿಸುವ ಕಾರ್ಯ ಮಾಡಬೇಕಿದೆ. ಕನ್ನಡ ಶಾಲೆಗಳ ಸಬಲೀಕರಣ ಪ್ರಥಮ ಆದ್ಯತೆಯಾಗಬೇಕು ಎಂದರು.

ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಶಿಕ್ಷಣದ ಚಟುವಟಿಕೆಗಳು ಭಾಷೆಯನ್ನು ಸಮೃದ್ಧವಾಗಿ ಬೆಳೆಸುತ್ತವೆ. ಈ ದಿಸೆಯಲ್ಲಿ ತೋಂಟದ ಸಿದ್ಧಲಿಂಗ ಶ್ರೀಗಳು ಭಾಷಾ ಬೆಳವಣಿಗೆ ಮತ್ತು ಉದ್ಯೋಗದ ದೃಷ್ಟಿಯಿಂದ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿದರು ಎಂದರು.

ಈ ವೇಳೆ ಶಿಕ್ಷಣದ ಉನ್ನತಿಗೆ ಶ್ರಮಿಸಿದ ಎಸ್.ಎಸ್. ಪಟ್ಟಣಶೆಟ್ಟರ ಹಾಗೂ ಡಾ. ಬಸವರಾಜ ಧಾರವಾಡ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಿ.ಕೆ.ಎಚ್. ಶಾಸ್ತ್ರಿ ಅನ್ನದಾನಿ ಹಿರೇಮಠ, ಡಿ.ಎಸ್. ಬಾಪುರಿ, ಅಮರೇಶ ರಾಂಪೂರ, ಸಿ.ಎಂ. ಮಾರನಬಸರಿ, ಪ್ರ.ತೋ. ನಾರಾಯಣಪೂರ, ಬಸವರಾಜ ವಾರಿ, ಸತೀಶ ಚನ್ನಪ್ಪಗೌಡ್ರ, ಬೂದಪ್ಪ ಅಂಗಡಿ, ಕು.ಶಿ. ಜಯದೇವಭಟ್, ಶಾರದಾ ಕಾತರಕಿ, ಮಲ್ಲಿಕಾರ್ಜುನ ನಿಂಗೋಜಿ, ಆನಂದ ಹಡಪದ, ಡಾ. ಬೂದೇಶ ಕನಾಜ ಹಾಗೂ ಮಹಾವಿದ್ಯಾಲಯದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

ಉದ್ಯೋಗಕ್ಕೆ ಆಗ್ರಹಿಸಿ ನರೇಗಾ ಕೂಲಿ ಕಾರ್ಮಿಕರ ಪ್ರತಿಭಟನೆ

ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಿಗದ ಕೆಲಸ: ಆರೋಪ

• **ಕನ್ನಡಪ್ರಭ ವಾರ್ತೆ** ಲಕ್ಷ್ಮೇಶ್ವರ

ಸೂರಣಗಿ ಗ್ರಾಪಂ ವತಿಯಿಂದ ಪ್ರತಿವರ್ಷ ಉದ್ಯೋಗ ಖಾತ್ರಿಯಲ್ಲಿ ಕಾರ್ಮಿಕರಿಗೆ ನೀಡಬೇಕಾದ ಕೆಲಸ ನೀಡಲು ಪೂರ್ವ ನಿಯೋಜಿತವಾಗಿರದೆ ಅಧಿಕಾರಿಗಳ ನಿಷ್ಕಾಳಜಿಯಿಂದ ಕಾರ್ಮಿಕರು ನಿರುದ್ಯೋಗಿಗಳಾಗುತ್ತಿದ್ದಾರೆ ಎಂದು ಆರೋಪಿಸಿ ಶುಕ್ರವಾರ ಗ್ರಾಮದ ಕಾರ್ಮಿಕರು ಗ್ರಾಪಂ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಈ ವೇಳೆ ಕೂಲಿ ಕಾರ್ಮಿಕರು ಮಾತನಾಡಿ, ಕಳೆದ ಎರಡು ದಿನದಿಂದ ಗ್ರಾಪಂ ಹೋಗಿ ಜಾಬ್ ಕಾರ್ಡ್ ಕೊಟ್ಟು ಬಂದರೂ ಎನ್‌ಎಂಆರ್ ಹಾಕಲಾರದೆ ಕೆಲಸ ನಡೆಯುವ ಸ್ಥಳದಲ್ಲಿ ಫೇಸ್ ಲಾಕ್ ಒಪನ್ ಆಗದೆ ಕೂಲಿ ಕಾರ್ಮಿಕರು ಕೆಲಸದಿಂದ ವಂಚಿತರಾಗುತ್ತಿದ್ದಾರೆ ಎಂದು ಆರೋಪಿಸಿದರು.

ಕೂಲಿ ಕಾರ್ಮಿಕರು ಗುಳೆ ಹೋಗಬಾರದು ಹಾಗೂ ಕೂಲಿ ಕಾರ್ಮಿಕರ ಗ್ರಾಮದಲ್ಲಿ ಕೆಲಸ ಸಿಗುತ್ತದೆ ಎಂದು ಸರ್ಕಾರ ಹೇಳುತ್ತಿದ್ದರೂ ಕೂಲಿ ಕೆಲಸ ನೀಡುವಲ್ಲಿ ಅಧಿಕಾರಿಗಳು ಮೀನಮೇಷ ಮಾಡುತ್ತಾರೆ.

ಸಂಬಂಧಪಟ್ಟ ಅಧಿಕಾರಿಗಳು ತಾಂತ್ರಿಕ ಸಮಸ್ಯೆ ಬಗೆಹರಿಸಿ ಕೂಲಿ ನೀಡಬೇಕು. ಇನ್ನೂ ಹಲವು ಸಮಸ್ಯೆಯಿಂದ ಕಾರ್ಮಿಕರು ಕೂಲಿಯಿಂದ ವಂಚಿತರಾಗುವಂತೆ ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮುತ್ತವ್ವ ಹಡಪದ, ಲಕ್ಷ್ಮೀ ಶಿರನಹಳ್ಳಿ, ಬಸಪ್ಪ ಕರಿಹಾಳ, ಬಾಬುಸಾಬ ಪಿಂಜಾರ, ಮಹಾಂತೇಶ ಮಳಗಿ, ಲಲಿತಾ ಬೆಟಗೇರಿ, ಶಾಂತವ್ವ ದಾಸರ್, ದೇವಪ್ಪ ರಾಹುತರ, ಶಿವರಾಜ ರಾಹುತರ, ಶಿವಾನಂದ ಮೂಲಿಮನಿ ಸೇರಿದಂತೆ ಅನೇಕರು ಇದ್ದರು.



ಸೂರಣಗಿಯಲ್ಲಿ ನರೇಗಾ ಕಾರ್ಮಿಕರು ಪ್ರತಿಭಟನೆ ನಡೆಸಿದರು.

> **ಕೂಲಿ ಕಾರ್ಮಿಕರು ಉದ್ಯೋಗದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು. ಇದರಿಂದ ಕೂಲಿ ಕಾರ್ಮಿಕರು ಗುಳೆ ಹೋಗುವುದು ತಪ್ಪುತ್ತದೆ. ಇಲ್ಲವಾದಲ್ಲಿ ಗುಳೆ ಅನಿವಾರ್ಯವಾಗುತ್ತದೆ. ಅಧಿಕಾರಿಗಳ ನಿರ್ಲಕ್ಷ್ಯ ಇದಕ್ಕೆ ಪ್ರಮುಖ ಕಾರಣ.**
> • **ಪ್ರವೀಣ ಸೂರಣಗಿ** ಗ್ರಾಪಂ ಮಾಜಿ ಸದಸ್ಯ

■ ಕೂಲಿ ಕಾರ್ಮಿಕರು ಗುಳೆ ಹೋಗಬಾರದು ಹಾಗೂ ಕೂಲಿ ಕಾರ್ಮಿಕರ ಗ್ರಾಮದಲ್ಲಿ ಕೆಲಸ ಸಿಗುತ್ತದೆ ಎಂದು ಸರ್ಕಾರ ಹೇಳುತ್ತಿದ್ದರೂ ಕೂಲಿ ಕೆಲಸ ನೀಡುವಲ್ಲಿ ಅಧಿಕಾರಿಗಳು ಮೀನಮೇಷ

ಹೇಮರಡ್ಡಿ ಮಲ್ಲಮ್ಮನ ಬದುಕು ದಾರಿದೀಪ

ದೇವಸ್ಥಾನ ನಿರ್ಮಾಣಕ್ಕೆ ಫಕೀರ ದಿಂಗಾಲೇಶ್ವರ ಶ್ರೀ ಚಾಲನೆ



ರೋಣದಲ್ಲಿ ಹೇಮರಡ್ಡಿ ಮಲ್ಲಮ್ಮನವರ ಜಯಂತ್ಯುತ್ಸವ ಕಾರ್ಯಕ್ರಮ ನಡೆಯಿತು.

• **ಕನ್ನಡಪ್ರಭ ವಾರ್ತೆ** ರೋಣ

ಮಹಾಸಾಧ್ವಿ, ಶಿವಶರಣೆ ಹೇಮರಡ್ಡಿ ಮಲ್ಲಮ್ಮನ ಬದುಕೇ ಎಲ್ಲರಿಗೂ ಆದರ್ಶನೀಯ. ಅವರ ತತ್ವ, ಸಂದೇಶಗಳೇ ಮಾರ್ಗದರ್ಶಿಯಾಗಲಿವೆ ಎಂದು ಶಿರಹಟ್ಟಿ ಫಕೀರ ದಿಂಗಾಲೇಶ್ವರ ಶ್ರೀಗಳು ತಿಳಿಸಿದರು.

ಶುಕ್ರವಾರ ಪಟ್ಟಣದ ಗುರುಭವನದಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸದ್ಬೋಧನಾ ಪೀಠದ ವತಿಯಿಂದ ಹಮ್ಮಿಕೊಂಡಿದ್ದ ಮಲ್ಲಮ್ಮನವರ ಜಯಂತ್ಯುತ್ಸವ ಹಾಗೂ ನೂತನ ದೇವಸ್ಥಾನ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ದಾನ, ದಾಸೋಹ ಹಾಗೂ ನಿಸ್ವಾರ್ಥ ಭಕ್ತಿಗೆ ಹೆಸರಾದ ಹೇಮರಡ್ಡಿ ಮಲ್ಲಮ್ಮ ಅವರು ಮೋಕ್ಷದ ಮಾರ್ಗ ತೋರಿಸಿದ ಮಹಾಸಾಧ್ವಿ. ಸಮಾಜ ಸುಧಾರಣೆಯಲ್ಲಿ ಕ್ರಾಂತಿ ಮಾಡಿದ ಅವರನ್ನು ಕೇವಲ ಒಂದು ಜಾತಿಗೆ ಸೀಮಿತಗೊಳಿಸಬಾರದು. ಅವರ ವಿಚಾರ ಮತ್ತು ತತ್ವಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡು ಮುಂದಿನ ಪೀಳಿಗೆಗೆ ಆದರ್ಶಪ್ರಾಯವಾಗಬೇಕು. ದೇಗುಲ ನಿರ್ಮಾಣ ಸಂಪೂರ್ಣವಾಗಿ ಕಲ್ಲಿನ ಕಟ್ಟಡದಿಂದಾಗಲಿ. ನಮ್ಮ ಮಠದ ವತಿಯಿಂದ ಹೇಮರಡ್ಡಿ ಮಲ್ಲಮ್ಮನ ಮೂರ್ತಿಯನ್ನು ಕೊಡಿಸುವುದಾಗಿ ಫಕೀರ ದಿಂಗಾಲೇಶ್ವರ ಶ್ರೀಗಳು ತಿಳಿಸಿದರು.

ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಅಚಲ ಭಕ್ತಿ, ಸತ್ಯ ನಿಷ್ಠೆ, ಮೌಲ್ಯ ಮತ್ತು ತತ್ವಗಳಿಗೆ ಬದ್ಧರಾಗಿ ನಡೆದುಕೊಂಡ ಹೇಮರಡ್ಡಿ ಮಲ್ಲಮ್ಮನವರು ಸಮಾಜದ ಎಲ್ಲ ಮಹಿಳೆಯರಿಗೂ ಆದರ್ಶಪ್ರಾಯವಾಗಿದ್ದಾರೆ ಎಂದರು.

ಡಾ. ಕೊಟ್ರೇಶ ಬಿದರಿ, ರಂಗನಾಥಗೌಡ ಕೆಂಪಲಿಂಗನಗೌಡ್ರ, ಫಕೀರಪ್ಪ ತಟ್ಟಿಮನಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಸವರಾಜ ಶರಣರು, ಅನ್ನಪೂರ್ಣಮ್ಮ ಜಿ. ಪಾಟೀಲ, ಶಶಿಕಲಾ ಪಾಟೀಲ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮಿಥುನ ಪಾಟೀಲ, ಶರಣಗೌಡ ಪಾಟೀಲ ಸರ್ಜಾಪುರ, ಅನೀಲ ತೆಗ್ಗಿನಕೇರಿ, ಕುಬೇರಪ್ಪ ಗಡಗಿ, ಶಿವಣ್ಣ ಅರಹುಣಸಿ, ಸುರೇಶ ಶಿರೋಳ, ಜಗದೀಶ ಅವರಡ್ಡಿ, ಹನುಮಂತ ಗಡಗಿ, ಅಶೋಕ ಗಡಗಿ, ಭೀಮರಡ್ಡಿ ರಡ್ಡೇರ ಮುಂತಾದವರು ಉಪಸ್ಥಿತರಿದ್ದರು. ಬಸವರಡ್ಡಿ ರಡ್ಡೇರ ನಿರೂಪಿಸಿ, ವಂದಿಸಿದರು.



ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ ಅವರ ಬಗ್ಗೆ ಅವಹೇಳನಕಾರಿ ಭಾಷಣ ಮಾಡಿದ ಬಿ.ಕೆ. ಹರಿಪ್ರಸಾದ ವಿರುದ್ಧ ಜಿಲ್ಲಾ ಬ್ರಾಹ್ಮಣ ಸಂಘದ ವತಿಯಿಂದ ಗದಗಿನ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿ, ನಂತರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಬಿ.ಕೆ. ಹರಿಪ್ರಸಾದ ವಿರುದ್ಧ ಪ್ರತಿಭಟನೆ

• **ಕನ್ನಡಪ್ರಭ ವಾರ್ತೆ** ಗದಗ

ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ ಅವರ ಬಗ್ಗೆ ಅವಹೇಳನಕಾರಿ ಭಾಷಣ ಮಾಡಿದ ಬಿ.ಕೆ. ಹರಿಪ್ರಸಾದ ವಿರುದ್ಧ ಜಿಲ್ಲಾ ಬ್ರಾಹ್ಮಣ ಸಂಘದ ವತಿಯಿಂದ ನಗರದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿ, ನಂತರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಇತ್ತೀಚೆಗೆ ನಡೆದ ಸಿಇಟಿ ಪರೀಕ್ಷೆಗೆ ಹಾಜರಾಗುವ ಸಮಯದಲ್ಲಿ ಬ್ರಾಹ್ಮಣ ಸಮಾಜದ ವಿದ್ಯಾರ್ಥಿಗಳ ಜನಿವಾರ ತೆಗೆಸಿದ್ದನ್ನು ಖಂಡಿಸಿದ ಬ್ರಾಹ್ಮಣ ಸಂಘದ ಸದಸ್ಯರು ಮಾನವ ಸರಪಳಿ ನಿರ್ಮಿಸಿ ಆಕ್ರೋಶ ವ್ಯಕ್ತಪಡಿಸಿದರು. ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ಮಾತನಾಡಿ, ಸಂಘದ ವತಿಯಿಂದ ರಾಜ್ಯಮಟ್ಟದಲ್ಲಿ ಉಗ್ರ ಹೋರಾಟ ಮಾಡುವುದಾಗಿ ತಿಳಿಸಿದರು.

■ ಸಿಇಟಿ ಪರೀಕ್ಷೆ ಸಮಯದಲ್ಲಿ ಬ್ರಾಹ್ಮಣ ಸಮಾಜದ ವಿದ್ಯಾರ್ಥಿಗಳ ಜನಿವಾರ ತೆಗೆಸಿದ್ದಕ್ಕೆ ಖಂಡನೆ

ಅನಿಲ ತೆಂಬದಮನಿ, ಗಿರೀಶ ಕುಲಕರ್ಣಿ, ಎಚ್.ಡಿ. ಪಾಟೀಲ, ವಾದಿರಾಜ, ಕೌಜಲಗಿ, ರಾಜೇಂದ್ರ ಕುಲಕರ್ಣಿ, ಶ್ರೀಪಾದ ನಾಯಕ ತಮ್ಮಣ್ಣವರ, ಪ್ರಲ್ಹಾದ ನಾರಪ್ಪನವರ, ರಾಘವೇಂದ್ರ ನಾರಪ್ಪನವರ, ಶಿರೀಷ ದೀಕ್ಷಿತ್, ಭೂಷಣ ಹುಯಿಲಗೋಳ, ರವಿಚಂದ್ರನ್ ಕುಲಕರ್ಣಿ, ಸಂಜೀವ ಕುಲಕರ್ಣಿ, ಸತೀಶ ಕುಲಕರ್ಣಿ, ಶ್ರೀಧರ ದೇಸಾಯಿ, ವಿರೂಪಾಕ್ಷ ಘಳಿಗಿ, ರಾಘವೇಂದ್ರ ಕುಲಕರ್ಣಿ, ಶ್ರೀಧರ ಕುಲಕರ್ಣಿ, ಕುಬೇರ ಸರ್, ಕೃಷ್ಣಾಜಿ ನಾಡಗೇರ, ಸುಧೀಂದ್ರ ದೇಶಪಾಂಡೆ, ಗಿರೀಶ ಜೋಶಿ, ಸಂತೋಷ ಕುಲಕರ್ಣಿ, ಸಂತೋಷ ಪಾಟೀಲ, ಸತೀಶ ಮುಜುಮದಾರ, ನಾಗೇಶ ಗುಡಿ, ವಿನಾಯಕ ಮುತಾಲಿಕ ಮುಂತಾದವರು ಇದ್ದರು.

ಬಣ್ಣನೆ... ಶಿವಾನುಭವ ಕಾರ್ಯಕ್ರಮದಲ್ಲಿ ಪ್ರೊ. ಕೆ.ಎಚ್. ಬೇಲೂರ

ಬಸವಣ್ಣ ಇಡೀ ಜಗತ್ತಿಗೆ ಸಾಂಸ್ಕೃತಿಕ ನಾಯಕ

• **ಕನ್ನಡಪ್ರಭ ವಾರ್ತೆ** ಗದಗ

ಬಿದ್ದವರನ್ನು ಎಬ್ಬಿಸುವ ಕೆಲಸ ಮಾಡುತ್ತಲೇ ತಮ್ಮ ಬಳಿಗೆ ಬಂದ ಎಲ್ಲರಿಗೂ ಕಾಯಕ ತತ್ವ ತಿಳಿಸಿದ ಬಸವಣ್ಣನವರು ಕರ್ನಾಟಕದ ಸಾಂಸ್ಕೃತಿಕ ನಾಯಕ. ಅಷ್ಟೇ ಅಲ್ಲ, ಅವರು ಇಡೀ ಜಗತ್ತಿಗೆ ಸಾಂಸ್ಕೃತಿಕ ನಾಯಕರಾಗಿದ್ದಾರೆ ಎಂದು ನಿವೃತ್ತ ಪ್ರಾ. ಪ್ರೊ. ಕೆ.ಎಚ್. ಬೇಲೂರ ತಿಳಿಸಿದರು.

ನಗರದ ಅಡವೀಂದ್ರ ಸ್ವಾಮಿ ಮಠದ ಅನ್ನಪೂರ್ಣೇಶ್ವರ ಮಂದಿರದಲ್ಲಿ ಜರುಗಿದ 347ನೇ ಮಾಸಿಕ ಶಿವಾನುಭವ ಹಾಗೂ ಬುದ್ಧ, ಬಸವ, ಅಂಬೇಡ್ಕರ್ ಜಯಂತ್ಯುತ್ಸವ ಸಮಾರಂಭದಲ್ಲಿ ಬುದ್ಧ, ಬಸವ, ಅಂಬೇಡ್ಕರರ ವಿಚಾರಧಾರೆಗಳ ಪ್ರಸ್ತುತೆ ಕುರಿತು ಉಪನ್ಯಾಸ ನೀಡಿದರು.

ಜಗತ್ತಿನಲ್ಲಿ ಶಾಂತಿ ಮತ್ತು ಮಾನವೀಯತೆ ನೆಲೆಸಲು ಭಗವಾನ್ ಬುದ್ಧನ ತತ್ವಗಳು ಸದಾಕಾಲ ಪ್ರಸ್ತುತವಾಗಿದ್ದು, ಅಹಿಂಸಾ ತತ್ವದ ಪಾಲನೆಯ ಮೂಲಕ ಇಡೀ ಜಗತ್ತನ್ನೇ ಬುದ್ಧ ಗೆಲ್ಲುವ ಮೂಲಕ ನಮಗೆಲ್ಲಾ ಆದರ್ಶಮಯವಾದರು. ಡಾ. ಬಾಬಾಸಾಹೇಬ್ ಅಂಬೇಡ್ಕರ್‌ಅವರು ಈ ಜಗತ್ತು ಕಂಡ ಶ್ರೇಷ್ಠ ಚಿಂತಕರಲ್ಲಿ ಒಬ್ಬರಾಗಿದ್ದು, ಅವರು ಅಪಾರ ಸಂಖ್ಯೆಯ ಪುಸ್ತಕಗಳನ್ನು ಓದಿದ್ದರಿಂದಾಗಿಯೇ ಭಾರತದಂತಹ ದೇಶಕ್ಕೆ ಸುಭದ್ರವಾದ ಸಂವಿಧಾನವನ್ನು ಕೊಡಲು ಸಾಧ್ಯವಾಯಿತು ಎಂದರು.

ನಗರಸಭೆ ಮಾಜಿ ಅಧ್ಯಕ್ಷ ಶಂಕರ್ ಹಾನಗಲ್ ಮಾತನಾಡಿ, ಮಹಾನ್ ದಾರ್ಶನಿಕರ ಜಯಂತಿ ಉತ್ಸವಗಳನ್ನು ಬರೀ ಫೋಟೋ ಪೂಜೆ ಮೆರವಣಿಗೆಯ ಮೂಲಕ ಮಾಡಿದರೆ ಸಾಲದು. ಅವರ ವಿಚಾರಧಾರೆಗಳನ್ನು ನಾಡಿಗೆ ಅದರಲ್ಲೂ ಮಕ್ಕಳಿಗೆ ತಿಳಿಸುವ ಕಾರ್ಯವಾದಾಗ ಮಾತ್ರ ಸಾರ್ಥಕವಾಗುತ್ತದೆ ಎಂದರು.

ಅಡವೀಂದ್ರ ಸ್ವಾಮಿ ಮಠದ ಶಿವಾನುಭವ ಸಮಿತಿ ಅಧ್ಯಕ್ಷ ಡಾ. ರಾಜೇಂದ್ರ ಗಡಾದ ಮಾತನಾಡಿ, ಮಹಾನ್ ದಾರ್ಶನಿಕರಾದ ಬುದ್ಧ ಬಸವ ಗಾಂಧಿ ಡಾ. ಅಂಬೇಡ್ಕರ್ ಅವರ ವಿಚಾರಗಳನ್ನು ನಿತ್ಯದ ಬದುಕಿನಲ್ಲಿ ಪ್ರತಿಯೊಬ್ಬರೂ ಅಳವಡಿಸಿಕೊಂಡಿದ್ದೆ ಆದಲ್ಲಿ ಎಲ್ಲೂ ಅಸಮಾನತೆ, ಮೇಲು ಕೀಳು , ಭೇದಭಾವ, ಅತ್ಯಾಚಾರ ಕೊಲೆ ಸುಲಿಗೆ, ಹಿಂಸೆ ಇವುಗಳನ್ನು ಕಾಣಲು ಸಾಧ್ಯವೇ ಇಲ್ಲ. ಅಷ್ಟೇ ಅಲ್ಲ, ಜಗತ್ತಿನಲ್ಲಿ ಯುದ್ಧದ ಸನ್ನಿವೇಶಗಳೇ ಸೃಷ್ಟಿಯಾಗುವುದಿಲ್ಲ. ಸಂಘರ್ಷವೆಂಬುದು ನೋಡಲು ಅಸಾಧ್ಯ ಎಂದರು.

ಅಡವೀಂದ್ರ ಸ್ವಾಮಿ ಮಠದ ಧರ್ಮದರ್ಶಿ ಮಹೇಶ್ವರ ಸ್ವಾಮಿಗಳು ಮಾತನಾಡಿದರು. ಬಸವ ತತ್ವ ಪ್ರತಿಪಾದಕ ಜಗದೀಶ್ ಚಂದ್ರ ನಾಡಗೌಡರ ಅವರನ್ನು ಸನ್ಮಾನಿಸಲಾಯಿತು.



ಕಾರ್ಯಕ್ರಮದಲ್ಲಿ ಪ್ರೊ. ಕೆ.ಎಚ್. ಬೇಲೂರ ಮಾತನಾಡಿದರು.

■ ಜಗತ್ತಿಗೆ ಮೊದಲ ಬಾರಿಗೆ ಪ್ರಜಾಪ್ರಭುತ್ವದ ಕಲ್ಪನೆ ನೀಡಿದ ಬಸವಣ್ಣನವರು ಇಂದಿಗೂ ಪ್ರಸ್ತುತವಾಗಿದ್ದಾರೆ

ಶಿವಾನುಭವದ ಭಕ್ತಿಸೇವೆಯನ್ನು ವಹಿಸಿಕೊಂಡ ಸಂಗಮ ಪ್ರಕಾಶನದ ಪ್ರಕಾಶಕಿ ಜ್ಯೋತಿ ಡಾ. ರಾಜೇಂದ್ರ ಗಡಾದ ದಂಪತಿಗಳನ್ನು ಸನ್ಮಾನಿಸಲಾಯಿತು.

ಆನಂದ ಹಿರೇಮಠ, ರೇಣುಕಾ ವಿ. ಬಾರಕೇರ, ಜ್ಯೋತಿ ರಾಜೇಂದ್ರ ಗಡಾದ, ಎಲ್.ಎಸ್. ನೀಲಗುಂದ, ಬಿ.ಎಂ. ಬಿಳೆಯಲಿ, ಸುಶೀಲಮ್ಮ ಕೋಟಿ, ಪ್ರೊ. ಆರ್.ಎಂ.ಬಡಿಗೇರ, ಮಾಲತೇಶ ಪಾಟೀಲ, ಜಿ.ಎಂ. ಯಾನಮಶೆಟ್ಟಿ, ರಾಜೇಶ ಮಾರನಬೀಡ, ಕೆ.ಎಸ್. ಪಲ್ಲೇದ ಮುಂತಾದವರು ಇದ್ದರು. ಗೀತಾ ಹೂಗಾರ ಪ್ರಾರ್ಥಿಸಿದರು. ಉಮಾಪತಿ ಭೂಸನೂರಮಠ ಸ್ವಾಗತಿಸಿದರು. ಬಿ.ಎಂ. ಕುಂದ್ರಾಳ್ ಹಿರೇಮಠ ನಿರೂಪಿಸಿದರು. ಸಿದ್ದಣ್ಣ ಜವಳಿ ಹಾಗೂ ಸಾಂಸ್ಕೃತಿಕ ಕಾರ್ಯದರ್ಶಿ ಗುರಪ್ಪ ನಿಡಗುಂದಿ ಪರಿಚಯಿಸಿದರು. ಮಾರುತಿ ಹೆಬ್ಬಾರೆ ವಂದಿಸಿದರು.

ಪ್ರಚಲಿತ ವಿದ್ಯಮಾನಗಳಿಗೆ ಕವಿತೆ ಬೆಳಕಾಗಲಿ

ಕನ್ನಡ ನುಡಿ ಸಡಗರ ಸಾಹಿತ್ಯ ಸಮ್ಮೇಳನದಲ್ಲಿ ಕವಿಗೋಷ್ಠಿಯಲ್ಲಿ ಶಿವಶಾಂತಾ ಬಿಸನಳ್ಳಿ

• **ಕನ್ನಡಪ್ರಭ ವಾರ್ತೆ** ಗದಗ

ಪ್ರಚಲಿತ ವಿದ್ಯಮಾನಗಳ ಮೇಲೆ ಬೆಳಕು ಚೆಲ್ಲುವ ಕವಿತೆಗಳು ಹೊರಹೊಮ್ಮಬೇಕು. ವಾಸ್ತವಿಕ ಬದುಕಿಗೆ ಹತ್ತಿರವಾಗುವ ಕವಿತೆಗಳು ಜನಮನ ಸೆಳೆಯಬಲ್ಲವು. ಅಂತಹ ಕವಿತೆಗಳ ರಚನೆಗೆ ಯುವ ಬರಹಗಾರರು ಮುಂದಾಗಬೇಕೆಂದು ಸಾಹಿತಿ ಶಿವಶಾಂತಾ ಬಿಸನಳ್ಳಿ ತಿಳಿಸಿದರು.

ನಗರದ ಲಯನ್ಸ್ ಭವನದಲ್ಲಿ ರಾಜ್ಯ ಲೇಖಕಿಯರ ಸಂಘ ಜಿಲ್ಲಾ ಘಟಕ ಹಾಗೂ ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆ ಜಿಲ್ಲಾ ಘಟಕ, ಧಾರವಾಡದ ಚೇತನ ಫೌಂಡೇಶನ್, ಬೆಂಗಳೂರಿನ ಗಂಧದಗುಡಿ ಕನ್ನಡ ಸಂಘದಿಂದ ನಡೆದ ರಾಜ್ಯ ಮಟ್ಟದ ಕನ್ನಡ ನುಡಿ ಸಡಗರ ಸಾಹಿತ್ಯ ಸಮ್ಮೇಳನದಲ್ಲಿ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬರಹಗಾರರು ಅಧ್ಯಯನಶೀಲರಾಗಬೇಕು. ಇತರ ಬರಹಗಾರರ ಸಾಹಿತ್ಯವನ್ನು ಓದುವ ಒಳ್ಳೆಯದನ್ನು ಸ್ವೀಕರಿಸುವ ಹಾಗೂ ಅಗತ್ಯವಿದ್ದಲ್ಲಿ ಸೂಕ್ತ ಮಾರ್ಗದರ್ಶನ ನೀಡಿ ಉತ್ತಮ ಸಾಹಿತ್ಯ ರಚನೆಗೆ ಪ್ರೇರಣೆ ನೀಡಬೇಕು. ಅಂದಾಗ ಸಾಹಿತ್ಯ ಸಂವರ್ಧಿಸುವುದು. ಸ್ನೇಹ ಬಲಗೊಳ್ಳುವುದು ಎಂದರು.

ಪ್ರೊ. ಪ್ರಕಾಶ ಸುಣಗಾರ ಮಾತನಾಡಿ, ಕಾವ್ಯ ಸಾಹಿತ್ಯದ ಜೀವಾಳ. ರವಿ ಕಾಣದ್ದನ್ನು ಕವಿ ಕಾಣುವನು ಎಂಬಂತೆ ಶಬ್ದ, ನುಡಿಗಳು ಅರ್ಥಪೂರ್ಣ ಎನ್ನಿಸುವಂತೆ ಕಾವ್ಯ ರಚನೆಗೆ ಯುವ ಬರಹಗಾರರು ಮುಂದಾಗಲಿ. ಜತೆಗೆ ಓದುಗರಿಗೆ, ಸಾಮಾನ್ಯರಿಗೂ ಅರ್ಥವಾಗುವ ಸರಳ ಭಾಷೆ ಬಳಕೆಯಾಗಲಿ ಎಂದರು.

ಈ ವೇಳೆ ಸಮ್ಮೇಳನದ ಸರ್ವಾಧ್ಯಕ್ಷೆ ರತ್ನಾ ಬದಿ ಮಾತನಾಡಿದರು. ಸಾಹಿತಿ ಪರ್ವಿನ್‌ಭಾನು ಬುಳ್ಳಣ್ಣವರ, ರಾಜೇಶ್ವರಿ ಹಿರೇಮಠ, ಮಂಜುನಾಥ ಭೀಮಕ್ಕಣ್ಣವರ, ಎಲ್.ಐ. ಲಕ್ಕಮ್ಮನವರ, ಸಾಹಿತಿ ಶಿವಲಿಂಗಪ್ಪ ಅಣ್ಣಿಗೇರಿ, ಶರಣಪ್ಪ ಹೊಸಂಗಡಿ, ಬಸವಣ್ಣೆವ್ವ ಹರ್ತಿ, ಜಿ.ಎನ್. ಪಾಟೀಲ, ನೇತ್ರಾ ಕುರಬರ, ಬೂದೇಶ ಮಜ್ಜಿಗುಡ್ಡ, ಸೌಜನ್ಯ ಪಾಟೀಲ, ಭಾಗ್ಯಶ್ರೀ ಹುರಕಡ್ಲಿ, ಶಿಲ್ಪಾ ಮಿಣಜಗಿ, ಕಸ್ತೂರಿ ಕಡಗದ, ರೇಖಾ ನಾಲ್ವಾಡ, ಮೇಘಾ ಬೆಳದಡಿ, ವಿಜಯಲಕ್ಷ್ಮೀ ಬಂಡಿವಾಡ, ಶಶಿಕಲಾ ಕಮತರ, ಜೆ. ಚಂದ್ರಶೇಖರ ಸೇರಿದಂತೆ ರಾಜ್ಯದ ವಿವಿಧೆಡೆಯಿಂದ ಆಗಮಿಸಿದ್ದ ಕವಿಗಳು ಕವನ ವಾಚಿಸಿದರು.



ಕವಿಗೋಷ್ಠಿಯಲ್ಲಿ ಸಾಹಿತಿ ಶಿವಶಾಂತಾ ಬಿಸನಳ್ಳಿ ಮಾತನಾಡಿದರು.

ದೀಪ್ತಿ ಪಾಠಕ, ಪುಷ್ಪಲತಾ ಬಸವರಾಜ ಬಳ್ಳಾರಿ, ಚಂಪಾ ಪಾಟೀಲ, ಸುಮತಿ ಮುರುಗೇಶ ಗದಗಿನಮಠ, ಉಡಚಮ್ಮ ಮುದಿಯಪ್ಪ ವಾಲ್ಮೀಕಿ, ಪ್ರೊ. ಸಿದ್ದಲಿಂಗೇಶ ಸಜ್ಜನಶೆಟ್ಟರ, ನಿರ್ಮಲಾ ಚಿತ್ತಾಮೂರ, ಶಕುಂತಲಾ ಬಂಡಿ, ರೇಖಾ ರೊಟ್ಟಿ, ಚಂದ್ರಕಲಾ ಸ್ಥಾವರಮಠ, ವಿಜಯಲಕ್ಷ್ಮೀ ಹಳ್ಳಿ, ಸಂಧ್ಯಾ ಕೋಟಿ, ಸುಶೀಲಾ ಕೋಟಿ, ವೀಣಾ ಕಾವೇರಿ, ಮೀನಾಕ್ಷಿ ಕೊರವನವರ, ಕಾವ್ಯಾ ದಂಡಿನ ಸೇರಿದಂತೆ ಸಾಹಿತಿಗಳು, ಗಣ್ಯರು ಇದ್ದರು. ಚೇತನಾ ಫೌಂಡೇಶನ್ ಅಧ್ಯಕ್ಷ ಚಂದ್ರಶೇಖರ ಮಾಡಲಗೇರಿ ಸ್ವಾಗತಿಸಿದರು. ಡಾ. ಜೆ. ಪ್ರೇಮಾ ನಿರೂಪಿಸಿದರು. ಸುಜಾತಾ ಪಾಟೀಲ ವಂದಿಸಿದರು.

ಇಂದಿನ ಪೀಳಿಗೆಯಲ್ಲಿ ಅಂಥ ಪ್ರವೃತ್ತಿ ಕಂಡುಬರುತ್ತಿಲ್ಲ. ಈ ಹಿನ್ನೆಲೆ ಮನೆ ಮನೆಗಳಲ್ಲಿ ಗೃಹಗ್ರಂಥಾಲಯ ಪ್ರಾರಂಭಿಸಿ ಪುಸ್ತಕಗಳು ಮಕ್ಕಳಿಗೆ ಓದಲು ದೊರಕುವಂತೆ ಮಾಡಬೇಕು.

• ಮಂಜುನಾಥ ಅಬ್ಬಿಗೇರಿ

ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಬೇಸಿಗೆ ಶಿಬಿರ ಸಹಕಾರಿ

ಮಕ್ಕಳು ಟಿವಿ, ಮೊಬೈಲ್‌ನಲ್ಲಿ ಕಾಲಹರಣ ಮಾಡದಿರಲಿ: ಡಾ. ಮಠ

• **ಕನ್ನಡಪ್ರಭ ವಾರ್ತೆ** ಮುಂಡರಗಿ

ರಜೆ ವೇಳೆ ಹೆಚ್ಚಾಗಿ ಮಕ್ಕಳು ಮನೆಯಲ್ಲಿ ಮೊಬೈಲ್, ಟಿವಿ ಮುಂದೆ ಕುಳಿತು ಸಮಯ ವ್ಯರ್ಥ ಮಾಡುತ್ತಾರೆ. ಹೀಗಾಗಿ ಮಕ್ಕಳು ಬೇಸಿಗೆ ಶಿಬಿರಗಳಲ್ಲಿ ಪಾಲ್ಗೊಂಡರೆ ಸಾಕಷ್ಟು ಮಾಹಿತಿ ಪಡೆದುಕೊಳ್ಳಬಹುದು ಎಂದು ವಿಶ್ರಾಂತ ಪ್ರಾ. ಡಾ. ಡಿ.ಸಿ. ಮಠ ತಿಳಿಸಿದರು.

ರಾಮೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಲಿಂ. ಶರಣ ಎಚ್.ಎಸ್. ಪಾಟೀಲ ಪ್ರತಿಷ್ಠಾನದ ಆಶ್ರಯದಲ್ಲಿ ಕನ್ನಡ ಕವಿತೆಗಳ ವಾಚನ ಹಾಗೂ ಗೀತಗಾಯನ ಮಕ್ಕಳ ಎರಡು ದಿನಗಳ ಬೇಸಿಗೆ ಶಿಬಿರ ಮುಕ್ತಾಯ ಸಮಾರಂಭದಲ್ಲಿ ಮಾತನಾಡಿದರು.

ಮಕ್ಕಳ ಸಾಧನೆಗೆ ಅವರ ಸೃಜನಶೀಲ ವ್ಯಕ್ತಿತ್ವ, ಆಸಕ್ತಿ ಪ್ರಮುಖ ಕಾರಣವಾಗಿದೆ. ಶಿಬಿರದಿಂದ ಅನೇಕ ವಿಷಯಗಳನ್ನು ಕಲಿಯಬಹುದು. ಈ ಶಿಬಿರವು ಕವಿತೆಗಳ ರಚನೆ ಮತ್ತು ಗಾಯನ, ನೃತ್ಯ ಸಂಗೀತಗಳ ಮೂಲಕ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗಲಿದೆ. ಇಂತಹ ಶಿಬಿರಗಳಿಂದ ಮಕ್ಕಳ ಉತ್ಸಾಹ ಹೆಚ್ಚಿಸುತ್ತದೆ ಎಂದರು.

ಶಿಬಿರದ ನಿರ್ದೇಶಕ ಡಾ. ನಿಂಗು ಸೊಲಗಿ ಮಾತನಾಡಿ, ಲಿಂ. ಶರಣ ಎಚ್.ಎಸ್. ಪಾಟೀಲ ಪ್ರತಿಷ್ಠಾನದ ಮೂಲಕ ಹಲವು ಸಮಾಜಮುಖಿ ಕಾರ್ಯಗಳು ಜರುಗುತ್ತಿವೆ. ಇದೀಗ ಅದರ ಹಾಗೂ ತಾಲೂಕು ಕಸಾಪದ ಸಹಯೋಗದಲ್ಲಿ ಬೇಸಿಗೆ ಶಿಬಿರ ಆಯೋಜಿಸಿದ್ದು, ಸಾಹಿತ್ಯ, ಸಂಗೀತ, ಕಲೆ, ರಂಗಭೂಮಿ, ಕ್ರಿಯಾತ್ಮಕ ಆಟಗಳು ಮಕ್ಕಳ ಕ್ರಿಯಾಶೀಲತೆ ಹೆಚ್ಚಿಸಲು ಶಿಬಿರದ ಉದ್ದೇಶ ಈಡೇರಿದೆ. ಸಂಪನ್ಮೂಲ ವ್ಯಕ್ತಿಗಳಿಂದ, ಗ್ರಾಮಸ್ಥರ ಸಹಕಾರದಿಂದ ಶಿಬಿರ ಯಶಸ್ವಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ತಾಲೂಕು ಕಸಾಪ ಅಧ್ಯಕ್ಷ ಎಂ.ಜಿ. ಗಚ್ಚಣ್ಣವರ, ವೀಣಾ ಪಾಟೀಲ, ಜಯಶ್ರೀ ಅಳವಂಡಿ, ಅಕ್ಕಮ್ಮ ಕೊಟ್ಟೂರ್‌ಶೆಟ್ಟರ್, ಎಸ್‌ಡಿಎಂಸಿ ಅಧ್ಯಕ್ಷ ಉಮೇಶ ದಂಡಿನ, ಪಿ.ಆರ್. ಗಾಡದ, ಪಿ.ಎಂ. ಲಾಂಡೆ, ಶಿವಲೀಲಾ ಅಬ್ಬಿಗೇರಿ, ಮಧುಮತಿ ಇಳಕಲ್, ಅವಿನಾಶ ಗೊಡಕಿಂಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಮಂಜುನಾಥ ಮುಧೋಳ ನಿರೂಪಿಸಿ, ವಂದಿಸಿದರು.



ಸಮಾರೋಪ ಸಮಾರಂಭದಲ್ಲಿ ಡಾ. ಡಿ.ಸಿ. ಮಠ ಮಾತನಾಡಿದರು.

■ ಮಕ್ಕಳ ಸಾಧನೆಗೆ ಅವರ ಸೃಜನಶೀಲ ವ್ಯಕ್ತಿತ್ವ, ಆಸಕ್ತಿ ಪ್ರಮುಖ ಕಾರಣವಾಗಿದೆ. ಶಿಬಿರದಿಂದ ಅನೇಕ ವಿಷಯಗಳನ್ನು ಕಲಿಯಬಹುದು

ಓದಿನ ಅಭಿರುಚಿಗೆ ಗೃಹ ಗ್ರಂಥಾಲಯ ಪೂರಕ

ಗದುಗಿನಲ್ಲಿ ಗೃಹ ಗ್ರಂಥಾಲಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಪ್ರೊ. ಬೇಲೂರ

• **ಕನ್ನಡಪ್ರಭ ವಾರ್ತೆ** ಗದಗ

ಮೊಬೈಲ್ ಗೀಳಿನಿಂದ ಇಂದಿನ ಪೀಳಿಗೆ ಪುಸ್ತಕ, ಪತ್ರಿಕೆಗಳನ್ನು ಓದಲು ಮನಸ್ಸು ಮಾಡುತ್ತಿಲ್ಲ. ಅವಸರದ ಜಗತ್ತು ಓದುವ ಸಂಸ್ಕೃತಿಯನ್ನು ದೂರ ಮಾಡುತ್ತಿದ್ದು, ಇದು ಅಪಾಯಕಾರಿ ಬೆಳವಣಿಗೆ. ಇದನ್ನು ತಡೆಯಲು ಕಬ್ಬಿಗರ ಕೂಟ ಹಮ್ಮಿಕೊಂಡ ಗೃಹ ಗ್ರಂಥಾಲಯ ಯೋಜನೆ ಸಹಕಾರಿಯಾಗಿದೆ ಎಂದು ಸಂಸ್ಕೃತಿ ಚಿಂತಕ ಪ್ರೊ. ಕೆ.ಎಚ್. ಬೇಲೂರ ತಿಳಿಸಿದರು.

ನಗರದ ಮಾಜಿ ನಗರಸಭೆ ಸದಸ್ಯ ವಿಜಯಕುಮಾರ ಶೆಟ್ಟರ ಅವರ ಮನೆಯಲ್ಲಿ ಕಬ್ಬಿಗರ ಕೂಟ ಹಾಗೂ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಜಿಲ್ಲಾದ್ಯಂತ ಆಸಕ್ತರ ಮನೆಗಳಲ್ಲಿ ಆರಂಭಿಸಲು ಉದ್ದೇಶಿಸಿದ ಗೃಹ ಗ್ರಂಥಾಲಯ ಸ್ಥಾಪನೆಯಡಿ ಪ್ರಾರಂಭಿಸಿದ ಪ್ರಥಮ ಗೃಹ ಗ್ರಂಥಾಲಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಂಪಾದಕ ಮಂಜುನಾಥ ಅಬ್ಬಿಗೇರಿ ಮಾತನಾಡಿ, ಪುಸ್ತಕವನ್ನು ಓದುವ ಅಭಿರುಚಿ ಬೆಳೆಸುವುದು ಇಂದಿನ ಅಗತ್ಯವಾಗಿದ್ದು, ಹಿಂದಿನ ಜನ ಅಪೂರ್ವ ಗ್ರಂಥಗಳನ್ನು ಸಂಗ್ರಹಿಸುವ ಹವ್ಯಾಸ ಹೊಂದಿದ್ದರು. ಆದರೆ ಇಂದಿನ ಪೀಳಿಗೆಯಲ್ಲಿ ಅಂಥ ಪ್ರವೃತ್ತಿ ಕಂಡುಬರುತ್ತಿಲ್ಲ. ಈ ಹಿನ್ನೆಲೆ ಮನೆ ಮನೆಗಳಲ್ಲಿ ಗೃಹಗ್ರಂಥಾಲಯ ಪ್ರಾರಂಭಿಸಿ ಪುಸ್ತಕಗಳು ಮಕ್ಕಳಿಗೆ ಓದಲು ದೊರಕುವಂತೆ ಮಾಡಬೇಕು ಎಂದರು.

ಕಬ್ಬಿಗರ ಕೂಟದ ಸಂಸ್ಥಾಪಕ ಡಿ.ವಿ. ಬಡಿಗೇರ ಮಾತನಾಡಿ, ಕನ್ನಡ ಪುಸ್ತಕ ಪ್ರಾಧಿಕಾರ ಮನೆಗೊಂದು ಗ್ರಂಥಾಲಯ ಸ್ಥಾಪಿಸುವ ಯೋಜನೆ ರೂಪಿಸಿದ್ದು, ಆದರೆ ಒಂದು ಪ್ರಮಾಣಪತ್ರ ನೀಡಿ ಗ್ರಂಥಾಲಯ ಪ್ರಾರಂಭಿಸಬೇಕೆಂದು ಹೇಳಿದರೆ ಗ್ರಂಥಾಲಯ ಸ್ಥಾಪನೆಗೆ ಜನ ಮುಂದೆ ಬರುವುದಿಲ್ಲ. ಕಾರಣ ಕಬ್ಬಿಗರ ಕೂಟ ಪುಸ್ತಕ ಸಂಸ್ಕೃತಿ ಮತ್ತು ವಾಚನಾಭಿರುಚಿ ಬೆಳೆಸಲು ಉಚಿತವಾಗಿ 10 ಪುಸ್ತಕಗಳನ್ನು ಮತ್ತು ಪ್ರಮಾಣಪತ್ರ ನೀಡಲು ಗೃಹ ಗ್ರಂಥಾಲಯ ಯೋಜನೆ ಕೈಗೊಂಡಿದ್ದು, ಆಸಕ್ತರು ಯಾವುದೇ ಹಣ ಖರ್ಚಿಲ್ಲದೆ ಗೃಹಗ್ರಂಥಾಲಯ ಸ್ಥಾಪನೆಗೆ ಮುಂದೆ ಬರಬೇಕೆಂದು ಮನವಿ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ಕಬ್ಬಿಗರ ಕೂಟದ ಅಧ್ಯಕ್ಷ ಮನೋಹರ ಮೇರವಾಡೆ ಅವರು ಗ್ರಂಥಾಲಯವನ್ನು ಮನೆಯಲ್ಲಿ ಸ್ಥಾಪಿಸಲು ಒಪ್ಪಿದ ವಿಜಯಕುಮಾರ ಶೆಟ್ಟರ ಅವರಿಗೆ 10 ಗ್ರಂಥಗಳನ್ನು ಹಸ್ತಾಂತರಿಸಿ ಶುಭ ಹಾರೈಸಿದರು.

ಈ ವೇಳೆ 75 ವರ್ಷ ಪೂರೈಸಿದ ಸಾಹಿತಿ ಡಿ.ವಿ. ಬಡಿಗೇರ ಹಾಗೂ ನಗರಸಭೆ ಸದಸ್ಯ ಮುತ್ತಣ್ಣ ಮುಶಿಗೇರ ಅವರನ್ನು ಸನ್ಮಾನಿಸಲಾಯಿತು.

ವಿಜಯಕುಮಾರ ಶೆಟ್ಟರ, ರಾಮಚಂದ್ರ ಮಾನೆ, ರಾಜೇಶ್ವರಿ ಶೆಟ್ಟರ, ಪ್ರ.ತೋ. ನಾರಾಯಣಪೂರ, ನಜೀರ ಸಂಶಿ, ವಿರೂಪಾಕ್ಷಪ್ಪ ಗೊಜನೂರ, ಬಸವರಾಜ ಬಟ್ಟೂರ, ಅಬ್ದುಲ್ ರೆಹಮಾನ ಹುಯಿಲಗೋಳ, ಎಂ.ಸಿ. ಬಟ್ಟೂರ, ಎಚ್.ಬಿ. ಯಲಬುರ್ಗಿ, ರೇಣುಕಾ ಅಮಾತೆ, ಸ್ಮಿತಾ ಗುಜಮಾಗಡಿ, ಅನ್ನಪೂರ್ಣ ಯಲಬುರ್ಗಿ, ಡಾ. ಶಿಲ್ಪಾ ಕುಷ್ಟಗಿ, ರಾಜಗೋಪಾಲ, ಮಂಗಳಾ ಜಿ., ಶಂಕ್ರಮ್ಮಾ ಬಟ್ಟೂರ, ರೇಣುಕಾ ಬಟ್ಟೂರ, ಸುವರ್ಣ ಕೊಣ್ಣೂರ, ಡಿ. ರೇಣುಕಾ, ವಿಶ್ವನಾಥ ಖಾನಾಪೂರ, ಮಂಜುನಾಥ ಬಟ್ಟೂರ, ಡಾ. ಕೆ. ಯೋಗೇಶನ್, ಬಸವರಾಜ ವಾರಿ, ಗೋಪಾಲ ಮಳಗಿ, ವಿಶ್ವನಾಥ ಶೆಟ್ಟರ ಮೊದಲಾದವರು ಇದ್ದರು. ಅಂದಾನೆಪ್ಪ ವಿಭೂತಿ ಸ್ವಾಗತಿಸಿದರು. ರಾಜೇಶ್ವರಿ ಶೆಟ್ಟರ ಸ್ವರಚಿತ ಕವನ ವಾಚನ ಮಾಡಿದರು.


ಕಾರ್ಯಕ್ರಮವನ್ನು ಮಂಜುನಾಥ ಅಬ್ಬಿಗೇರಿ ಉದ್ಘಾಟಿಸಿದರು.

ಪಡಿತರ ವಿತರಣೆ: ಗ್ರಾಹಕರಿಗೆ ಸೂಚನೆ

ಗದಗ: ಪಡಿತರ ಆಹಾರ ಧಾನ್ಯವನ್ನು ಕೇಂದ್ರ ವ್ಯಾಪ್ತಿಯ ಎನ್‌ಎಫ್‌ಎಸ್‌ಎ ವರ್ಗದಡಿ ಮೇ ಹಾಗೂ ಜೂನ್ ಎರಡು ಮಾಹೆಗಳಿಗೆ ಸಂಬಂಧಿಸಿದಂತೆ ಜಿಲ್ಲೆಯ ಒಟ್ಟು 366 ನ್ಯಾಯಬೆಲೆ ಅಂಗಡಿಗಳ ಮೂಲಕ ವಿತರಿಸಲಾಗುತ್ತದೆ.

ಅಂತ್ಯೋದಯ ಪಡಿತರ ಚೀಟಿಗೆ 35 ಕೆಜಿ+ 35 ಕೆಜಿ ಒಟ್ಟು 70 ಕೆಜಿ ಅಕ್ಕಿ, ಆದ್ಯತಾ(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ ರಾಜ್ಯ ಮತ್ತು ಕೇಂದ್ರ ವರ್ಗದಡಿಯ ಪಡಿತರ ಕಾರ್ಡುಗಳಿಗೆ 5 ಕೆಜಿ+ 5 ಕೆಜಿ 10 ಕೆಜಿ ಅಕ್ಕಿಯನ್ನು ವಿತರಿಸಲಾಗುವುದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಹಾಸ್ಟೆಲ್‌ಗೆ ಬೇಕಿದೆ ಬಾಡಿಗೆ ಕಟ್ಟಡ

ಗದಗ: 2026- 27ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಸತಿನಿಲಯಕ್ಕೆ 100 ವಿದ್ಯಾರ್ಥಿಗಳಿಗೆ ಬೇಕಾಗುವ 2 ವಸತಿನಿಲಯಕ್ಕೆ ಬಾಡಿಗೆ ಕಟ್ಟಡಗಳು ಬೇಕಾಗಿದೆ.

ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಇರುವ ಪ್ರತ್ಯೇಕ ಕೊಠಡಿಗಳು, ಶೌಚಾಲಯ, ಸ್ನಾನಗೃಹ ವಿಶಾಲವಾದ ಅಡುಗೆ ಮನೆ, ವಿದ್ಯುತ್ ಸೌಲಭ್ಯ, ಬೋರವೆಲ್ ಹೊಂದಿರುವ ಸುಸಜ್ಜಿತ ವಸತಿನಿಲಯ ಬಾಡಿಗೆ ಕಟ್ಟಡ ಬೇಕಾಗಿದೆ. ಕಟ್ಟಡವನ್ನು ಬಾಡಿಗೆ ರೂಪದಲ್ಲಿ ಕೊಡಲು ಬಯಸುವ ಕಟ್ಟಡ ಮಾಲೀಕರು ತಕ್ಷಣ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಎಸ್ಪಿ ಆಫಿಸ್ ಎದುರಿಗೆ ಗದಗ ಇವರನ್ನು ಭೇಟಿ ನೀಡಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ. 08372-297258, ಮೊ. 9480843128 ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಅವಧಿ ವಿಸ್ತರಣೆ

ಗದಗ: 2026-27 ಸಾಲಿನ ಈ.ಝ್ಛ ಉಥ ಸರ್ಕಾರಿ, ಮಾನ್ಯತೆ ಪಡೆದ ಅನುದಾನಿತ ಹಾಗೂ ಅನುದಾನ ರಹಿತ ಸಂಸ್ಥೆಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳ ದಾಖಲಾತಿಗಾಗಿ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.



ಮೇ 6ರಿಂದ ಜೂನ್ 1ರ ವರೆಗೆ www.schooleducation.karnataka.gov.in ನಲ್ಲಿ ಪ್ರಕಟಿಸಲಾದ ಅಧಿಸೂಚನೆಯಲ್ಲಿ ಅರ್ಹತೆ, ಮೀಸಲಾತಿ, ಶುಲ್ಕ ಇತ್ಯಾದಿ ವಿವರ ನೀಡಲಾಗಿದೆ. ಇದರೊಂದಿಗೆ ಜಿಲ್ಲಾವಾರು D.El.Ed, D.P.Ed & D.P.S.E ಶಿಕ್ಷಣ ಸಂಸ್ಥೆಗಳ ಪಟ್ಟಿಯನ್ನು ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಕ್ರಮಬದ್ಧವಾಗಿ ಅರ್ಜಿಯನ್ನು ಭರ್ತಿ ಮಾಡಿ ಸಂಬಂಧಪಟ್ಟ ಜಿಲ್ಲಾ ವ್ಯವಸ್ಥಾಪಕ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ- DIET ಗಳಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಶಾಲಾ ಶಿಕ್ಷಣ ವೆಬ್‌ಸೈಟ್‌ನಲ್ಲಿ(ಮೊ. 7619277145) ಹಾಗೂ ಡಯಟ್ ನೋಡಲ್ ಅಧಿಕಾರಿ ಜಿ.ಎಂ. ಮುಂದಿನಮನಿ ಅವರನ್ನು ಸಂಪರ್ಕಿಸಬಹುದು.